# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 278 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 27–05–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 Issue - 278 | Title- Code: KARKAN 28269 | Chitradurga | Date: 27-05-2024 Monday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಮದುವೆ ಆಮಿಷವೊಡ್ಡಿ ಅತ್ಯಾಚಾರ: ಮನನೊಂದ ಬಾಲಕಿ ನೇಣಿಗೆ ಶರಣು 2

ಪ್ರವಾಸಕ್ಕೆ ತೆರಳಿದ್ದ ನಿರ್ಮಲಮ್ಮ ಶವವಾಗಿ ಹೊಳಲ್ಕೆರೆಗೆ 3

ಶಿಕ್ಷಕರ ಕ್ಷೇತ್ರ: ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್ ಪರ ಶಾಸಕ ಟಿ.ರಘುಮೂರ್ತಿ ಪ್ರಚಾರ 4



ಸುದ್ದಿ, ಜಾಹಿರಾತಿಗೆ 9686622252


# ಮೈದುಂಬಿ ಹರಿಯುತ್ತಿರುವ ವೇದಾವತಿ ನದಿ: ಕೆಲ್ಲೋಡು ಬ್ಯಾರೇಜ್‌ನಲ್ಲಿ ಭರ್ಜರಿ ಮೀನು ಶಿಕಾರಿ

» **ಪಿ.ಟಿ.ಸಿದ್ದೇಶ್ ಲಕ್ಕಿಹಳ್ಳಿ**

ನಮ್ಮ ಜನ ವಿಶೇಷ



ಹೊಸದುರ್ಗ: ಕಳೆದ ಒಂದು ವಾರಗಳಿಂದ ಹೊಸದುರ್ಗ ತಾಲೂಕಿನ ಹಲವೆಡೆ ಹಾಗೂ ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಸುರಿಯುತ್ತಿರುವ ಮಳೆಗೆ, ವೇದಾವತಿ ನದಿ ಮೈದುಂಬಿ ಕೆಲ್ಲೋಡು ಬ್ಯಾರೇಜ್ ಮೂಲಕ ವಿವಿ ಸಾಗರ ಜಲಾಶಯ ಸೇರುತ್ತಿದೆ. ಬರುತ್ತಿರುವ ಹೊಸ ನೀರಿಗೆ ಜಲಾಶಯದಲ್ಲಿದ್ದ ಮೀನುಗಳು ಹೊರ ಬರುತ್ತಿದ್ದು, ಮೀನುಗಳ ಶಿಕಾರಿಗಾಗಿ ಕೆಲ್ಲೋಡು ಬ್ಯಾರೇಜ್ ಬಳಿ ನೂರಾರು ಜನರು ಹರಿಯುವ ನೀರಿಗೆ ಬಲೆ ಮತ್ತು ಗಾಣ ಹಾಕಿ ಕಾದು ಕುಳಿತುಕೊಳ್ಳುವ ದೃಶ್ಯ ಶನಿವಾರ ಕಂಡುಬಂದಿತು.

ಮಧ್ಯ ಕರ್ನಾಟಕದ ಜಲಪಾತ್ರೆ ಎಂದು ಖ್ಯಾತಿ ಪಡೆದಿರುವ ವಿವಿ ಸಾಗರ ಜಲಾಶಯ 2 ವರ್ಷಗಳ ಹಿಂದೆ (2022 ಸೆ.1) ನಿರಂತರವಾಗಿ ಸುರಿದ ಮಳೆಯಿಂದಾಗಿ 88 ವರ್ಷಗಳ ಬಳಿಕ ಕೊಡಿ ಬಿದ್ದು, 5 ತಿಂಗಳು ಕೋಡಿಯ ನೀರು ಹೊರಹರಿದು ಹೋಗಿತ್ತು. ಆಗ ವಿವಿ ಸಾಗರ ಜಲಾಶಯದ ಮಟ್ಟ 135 ಅಡಿ ತಲುಪಿತ್ತು. 2 ವರ್ಷ ಪೂರ್ಣಗೊಳ್ಳುವುದರೊಳಗಾಗಿ ನೀರಿನ ಮಟ್ಟ 112 ಅಡಿಗೆ ಇಳಿದಿತ್ತು. ಡ್ಯಾಮ್ ಭರ್ತಿಯಾದ ಸಂದರ್ಭದಲ್ಲಿ ಜಲಾಶಯದ ಹಿನ್ನೀರು ಹೊಸದುರ್ಗ ತಾಲೂಕಿನ ಬಹಳಷ್ಟು ಗ್ರಾಮಗಳ ಸಮೀಪಕ್ಕೆ ಬಂದು ನಿಂತು, ಜನರು ಅತಿವೃಷ್ಟಿಯಿಂದಾಗಿ ಬಹಳಷ್ಟು ಸಮಸ್ಯೆ ಎದುರಿಸಿದರು. ಒಂದು ವರ್ಷಕ್ಕೆ ಅಂತರ್ಜಲ ಮಟ್ಟ ಕುಸಿತ ಕಂಡು ಅನಾವೃಷ್ಟಿ ಎದುರಿಸುವ ಪರಿಸ್ಥಿತಿ ಎದುರಾಗಿತ್ತು. ಆದರೆ, ಕೃತಿಕ ಮಳೆ ಉತ್ತಮವಾಗಿ ಬಂದಿದ್ದು, ರೈತರು ಸಂತಸಗೊಳ್ಳುವಂತಾಗಿದೆ. ಮೈದುಂಬಿ ಹರಿಯುತ್ತಿರುವ ವೇದಾವತಿ ನದಿಯನ್ನು ನೋಡಲು ನಿತ್ಯವೂ ಕೆಲ್ಲೋಡು ಬ್ಯಾರೇಜ್ ನತ್ತ ಸಾವಿರಾರು ಜನರು ದೌಡಯಿಸುತ್ತಿದ್ದಾರೆ.

ಪುಟ 3

### ಟ್ಯಾಂಕರ್ ನೀರಿಗೆ ವಿದಾಯ ಹೇಳಿದ ಅಡಿಕೆ ಬೆಳೆಗಾರರು

ಕಳೆದ ಒಂದು ವರ್ಷದಿಂದ ತಾಲೂಕಿನಾದ್ಯಂತ ತೀವ್ರ ಬರಗಾಲದ ಪರಿಸ್ಥಿತಿ ಆವರಿಸಿತ್ತು. ಅಂತರ್ಜಲದ ಮಟ್ಟ ಕುಸಿತ ಕಂಡು ಕೊಳವೆ ಬಾವಿಗಳಲ್ಲಿ ನೀರು ಬರಿದಾಗಿ ಅಡಿಕೆ ಮತ್ತು ಇನ್ನಿತರ ಬೆಳೆಗಳ ಬೆಳೆಗಾರರು ಬೆಳೆಗಳಿಗೆ ನೀರಿಲ್ಲದೆ, ನಿತ್ಯವೂ ಸಮಸ್ಯೆ ಎದುರಿಸುತ್ತಿದ್ದರು. ಒಣಗಿಹೋಗುತ್ತಿದ್ದ ತೋಟಗಳನ್ನು ಉಳಿಸಿಕೊಳ್ಳಲು ಕೆಲವು ರೈತರು ಟ್ಯಾಂಕರ್ ಮೂಲಕ ತಮ್ಮ ತೋಟಗಳಿಗೆ ನೀರು ಹಾಯಿಸಿಕೊಳ್ಳುತ್ತಿದ್ದರು. ಆದರೆ, ಇದೀಗ ಒಂದು ವಾರಗಳಿಂದ ತಾಲೂಕಿನಾದ್ಯಂತ ಉತ್ತಮ ಹದ ಮಳೆಯಾಗುತ್ತಿದ್ದು, ರೈತರು ನಿಟ್ಟುಸಿರು ಬಿಟ್ಟಿದ್ದಾರೆ. ಹೊಸದುರ್ಗ ಪಟ್ಟಣ ಸೇರಿದಂತೆ ಸುತ್ತಮುತ್ತಲ ಗ್ರಾಮಗಳಲ್ಲಿನ ಕೊಳವೆ ಬಾವಿಗಳಲ್ಲಿ ಅಂತರ್ಜಲ ಮಟ್ಟ ಸ್ವಲ್ಪ ಹೆಚ್ಚಾಗಿದ್ದು, ಜನರು ಸಂತಸಗೊಂಡಿದ್ದಾರೆ.

ಕಳೆದ 6 ತಿಂಗಳಿನಿಂದ ಪಟ್ಟಣದ ಜನರಿಗೆ ನೀರಿನ ಸಮಸ್ಯೆ ಎದುರಾಗಿತ್ತು. ಬಹಳಷ್ಟು ಬೋರ್ವೆಲ್ಗಳಲ್ಲಿ ನೀರು ಬರುವುದೇ ನಿಂತು ಹೋಗಿದ್ದವು. ಕುಡಿಯುವ ನೀರಿಗೂ ಕೂಡ ಪರದಾಟ ನಡೆಸುವಂತಹ ಸ್ಥಿತಿ ನಿರ್ಮಾಣವಾಗಿತ್ತು. ಪಟ್ಟಣದ ಜನರಿಗೆ ಕೆಲ್ಲೋಡು ಬ್ಯಾರೇಜ್ ಜೀವ ಜಲವಾಗಿದೆ. 6 ತಿಂಗಳಿಂದ ಬ್ಯಾರೇಜ್ ನಲ್ಲಿ ನೀರಿಲ್ಲದೆ ಸಂಪೂರ್ಣವಾಗಿ ಖಾಲಿಯಾಗಿತ್ತು. ಇದರಿಂದಾಗಿ ದಿನನಿತ್ಯ ಬಳಕೆಯ ನೀರಿಗೂ ಸಮಸ್ಯೆಯಾಗಿತ್ತು. ವಿವಿ ಸಾಗರ ಜಲಾಶಯದ ಹಿನ್ನೀರಿನಿಂದ ಟ್ಯಾಂಕರ್ ಗಳ ಮೂಲಕ ಮನೆಗಳಿಗೆ ನೀರು ಹೊಡೆಸಲಾಗುತ್ತಿತ್ತು. ಆದರೆ, ಇದೀಗ ಕೆಲ್ಲೋಡ್ ಬ್ಯಾರೇಜ್ ಸಂಪೂರ್ಣವಾಗಿ ಮೈದುಂಬಿ ಹರಿಯುತ್ತಿದ್ದು, ಪಟ್ಟಣದ ಜನರಿಗೆ ನೀರಿನ ಸಮಸ್ಯೆ ದೂರವಾಗಿದೆ.

» **ಹೆಚ್.ಆರ್.ಕಿರಣ್ ಕುಮಾರ್ ಹೊಸದುರ್ಗ ಪಟ್ಟಣದ ನಿವಾಸಿ.**

### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

» **ಚಿತ್ರದುರ್ಗ**

ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ 2024ನೇ ಶೈಕ್ಷಣಿಕ ಸಾಲಿನ ಪ್ರವೇಶಾತಿ ಪ್ರಕ್ರಿಯೆ ಪ್ರಾರಂಭವಾಗಿದೆ. ಜೂನ್ 03 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಚಿತ್ರದುರ್ಗ ನಗರದ ಸ್ಟೇಡಿಯಂ ರಸ್ತೆಯ ಸರ್ಕಾರಿ ಮಹಿಳಾ ತರಬೇತಿ ಸಂಸ್ಥೆಗೆ ಪ್ರವೇಶ ಬಯಸುವ ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಮತ್ತು ಅರ್ಹ ಆಸಕ್ತ ಅಭ್ಯರ್ಥಿಗಳು www.cite.karnataka.gov.in ತಂತ್ರಾಂಶದ ಮೂಲಕ ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸಬಹುದು. ಈ ಸಂಸ್ಥೆಯು ಮಹಿಳಾ ಸಂಸ್ಥೆಯಾಗಿರುವುದರಿಂದ ಎಲ್ಲಾ ಸೀಟುಗಳು ಮಹಿಳೆಯರಿಗೆ ಮೀಸಲಾಗಿರುತ್ತವೆ. ಮಹಿಳೆಯರಿಗೆ ಹಂಚಿಕೆಯಾಗದೆ ಉಳಿದ ಸೀಟುಗಳನ್ನು ಪುರುಷರಿಗೆ ಹಂಚಿಕೆ ಮಾಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08194–234515 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಅತಿಥಿ ಶಿಕ್ಷಕರ, ಉಪನ್ಯಾಸಕರ ನೇಮಕಕ್ಕೆ ಅರ್ಜಿ



» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಕಾಲೇಜು, ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ ಅತಿಥಿ ಶಿಕ್ಷಕರು, ಉಪನ್ಯಾಸಕರ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ. ಎಂ.ಎ, ಬಿ.ಇಡಿ, ಬಿ.ಎ, ಬಿ.ಇಡಿ, ಎಂ.ಎಸ್ಸಿ ಬಿ.ಇಡಿ, ಬಿ.ಎಸ್ಸಿ, ಬಿಇಡಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಜೂನ್ 2 ರೊಳಗಾಗಿ ಜಿಲ್ಲಾ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಸ್ಟೇಡಿಯಂ ರಸ್ತೆ, ಆಂಜನೇಯ ದೇವಸ್ಥಾನ ಎದುರು, ಶ್ರೀರಾಮ ಕಾಂಪ್ಲೆಕ್ಸ್, ಮೊದಲನೇ ಮಹಡಿ, ಚಿತ್ರದುರ್ಗ ಇಲ್ಲಿಗೆ ಸಲ್ಲಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

### ಬನಶ್ರೀ ವೃದ್ಧಾಶ್ರಮದಲ್ಲಿ ನ್ಯಾನೋ ಕಥಾಗೋಷ್ಠಿ

» **ಚಳ್ಳಕೆರೆ**

ವಿಶ್ವ ಅಮ್ಮಂದಿರ ದಿನಾಚರಣೆ ಅಂಗವಾಗಿ ಚಿನ್ಮೂಲಾದ್ರಿ ಸಾಹಿತ್ಯವೇದಿಕೆ, ತನುಶ್ರೀಪ್ರಕಾಶನ ವತಿಯಿಂದ ನಗರದ ಬೆಂಗಳೂರು ರಸ್ತೆಯ ಬನಶ್ರೀ ವೃದ್ಧಾಶ್ರಮದಲ್ಲಿ ಮೇ. 26ರ ಭಾನುವಾರ ಬೆಳಗ್ಗೆ 10.30ಕ್ಕೆ ನ್ಯಾನೋ ಕಥಾಗೋಷ್ಠಿ ಕಾರ್ಯಕ್ರಮವನ್ನು ಸಾಹಿತಿ ಕೊರ್ಲಕುಂಟೆ ತಿಪ್ಪೇಸ್ವಾಮಿ ತಿಳಿಸಿದ್ದಾರೆ.

ಅವರು, ಈ ಬಗ್ಗೆ ಮಾಹಿತಿ ನೀಡಿ, ಕಾರ್ಯಕ್ರಮವನ್ನು ಚಿತ್ರದುರ್ಗದ ಹಿರಿಯ ವಕೀಲ ಬಿ.ಕೆ.ರಹಮತ್‌ವುಲ್ಲಾ ಉದ್ಘಾಟಿಸಲಿದ್ದು, ವೇದಿಕೆ ಅಧ್ಯಕ್ಷ ಡಾ.ಶಫೀವುಲ್ಲಾ ಕಾರ್ಯಕ್ರಮ ಅಧ್ಯಕ್ಷತೆ ವಹಿಸುವರು. ಕಥಾಗೋಷ್ಠಿಗೆ ಹೆಚ್ಚಿನ ಸಂಖ್ಯೆಯಲ್ಲಿ ಸಾಹಿತ್ಯಾಸಕ್ತರು ಆಗಮಿಸುವಂತೆ ಮನವಿ ಮಾಡಲಾಗಿದೆ.

### ವಿಶ್ವ ಸ್ಕಿಜೋಫ್ರೇನಿಯಾ ದಿನಾಚರಣೆಯ ಪ್ರಯುಕ್ತ ಆಯೋಜನೆ

## ನಿರಾಶ್ರಿತ ಕೇಂದ್ರದಲ್ಲಿ ಮನೋಚೈತನ್ಯ ಶಿಬಿರ

» **ಚಿತ್ರದುರ್ಗ**



ಚಿತ್ರದುರ್ಗ ತಾಲ್ಲೂಕಿನ ಗೋನೂರು ಸಮೀಪದ ಹೋ.ಚಿ.ಬೋರಯ್ಯ ಬಡಾವಣೆಯ ನಿರಾಶ್ರಿತರ ಪರಿಹಾರ ಕೇಂದ್ರದಲ್ಲಿ ಶುಕ್ರವಾರ ಜಿಲ್ಲಾ ಆರೋಗ್ಯ ಇಲಾಖೆ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದವತಿಯಿಂದ ವಿಶ್ವಸ್ಕಿಜೋಫ್ರೇನಿಯ ದಿನಾಚರಣೆಯ ಪ್ರಯುಕ್ತ ಮನೋಚೈತನ್ಯ ಕಾರ್ಯಕ್ರಮ ಆಚರಿಸಲಾಯಿತು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಜಿ.ಓ.ನಾಗರಾಜ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪ್ರತಿವರ್ಷ ಮೇ 24ರಂದು ವಿಶ್ವದಾದ್ಯಂತ ಸ್ಕಿಜೋಫ್ರೇನಿಯಾ ಕಾಯಿಲೆ ಕುರಿತು ಜಾಗೃತಿ ಮೂಡಿಸುವ ಸಲುವಾಗಿ ವಿಶ್ವದಾದ್ಯಂತ ವಿಶ್ವ ಸ್ಕಿಜೋಫ್ರೇನಿಯಾ ದಿನಾಚರಣೆಯನ್ನು ಆಚರಿಸಲಾಗುತ್ತದೆ,ಸ್ಕಿಜೋಫ್ರೇನಿಯಾಎನ್ನುವುದು ತೀವ್ರತರವಾದ ಮಾನಸಿಕ ಕಾಯಿಲೆಯಾಗಿದ್ದು ಈ ರೀತಿಯ ಕಾಯಿಲೆ ಇರುವವರನ್ನು ಮನೆಯಲ್ಲಿ ಅಥವಾ ಸಮುದಾಯದಲ್ಲಿ ಕಳಂಕ ಮತ್ತು ತಾರತಮ್ಯದಿಂದ ಬಂಧಿಸುವುದು ಹಗ್ಗದಿಂದ ಕಟ್ಟಿ ಹಾಕುವುದು ಮತ್ತು ಶಿಕ್ಷೆ ಕೊಡುವುದನ್ನು ಮಾಡುವುದು ಸರಿಯಲ್ಲ, ಇವರು ಕೂಡ ನಮ್ಮ ನಿಮ್ಮ ಹಾಗೆ ಮನುಷ್ಯರಾಗಿದ್ದು, ಸ್ಕಿಜೋಫ್ರೇನಿಯಾ ಕಾಯಿಲೆಯಿಂದ ಬಳಲುವವರಿಗೆ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ತಾಲೂಕು ಆಸ್ಪತ್ರೆಗಳಲ್ಲಿ ಜಿಲ್ಲಾ ಆಸ್ಪತ್ರೆಯ ಮನೋವೈದ್ಯರಿಂದ ಚಿಕಿತ್ಸೆ ದೊರೆಯುತ್ತದೆ ಚಿಕಿತ್ಸೆ ಪಡೆದುಕೊಂಡು ಸಂಪೂರ್ಣವಾಗಿ ಗುಣಮುಖರಾಗಬೇಕು ಎಂದರು. ಸ್ಕಿಜೋಫ್ರೇನಿಯಾ ಕಾಯಿಲೆಯೂ ಪ್ರತಿ 100ರಲ್ಲಿ ಒಬ್ಬರಿಗೆ ಬರುವಂತಹ ತೀವ್ರತರವಾದ ಮಾನಸಿಕ ಕಾಯಿಲೆಯಾಗಿದ್ದು, ಈ ಕಾಯಿಲೆ ಇರುವ ವ್ಯಕ್ತಿಯು ನೈಜ ಜಗತ್ತಿನ ಜೊತೆ ಸಂಪರ್ಕದಲ್ಲಿ ಇರುವುದಿಲ್ಲ. ಈ ವ್ಯಕ್ತಿಗೆ ಭ್ರಮೆ ಅಥವಾ ಭ್ರಾಂತಿಗಳು ಕಂಡುಬರುತ್ತವೆ. ಸಕಾಲದಲ್ಲಿ ತಾರತಮ್ಯ ಮಾಡದೆ ಚಿಕಿತ್ಸೆ ಕೊಟ್ಟು ಕೊಡಿಸುವುದರ ಮೂಲಕ ಸಂಪೂರ್ಣವಾಗಿ ಕಾಯಿಲೆಯಿಂದಗುಣಮುಖರಾಗಬೇಕುಎಂದರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಕ್ಲಿನಿಕಲ್ ಸೈಕಾಲಜಿಸ್ಟ್ ಟಿ.ಶ್ರೀಧರ್ ಮಾತನಾಡಿ, ಸ್ಕಿಜೋಫ್ರೇನಿಯಾ ಕಾಯಿಲೆ ಇರುವ ವ್ಯಕ್ತಿಗೆ ತನ್ನ ಕಾಯಿಲೆ ಬಗ್ಗೆ ಅರಿವು ಇರುವುದಿಲ್ಲ. ವಿಚಿತ್ರವಾಗಿ ವರ್ತಿಸುತ್ತಾರೆ ವಿಚಿತ್ರವಾಗಿ ಮಾತನಾಡುತ್ತಾರೆ ವೇಷ ಭೂಷಣ ವಿಚಿತ್ರವಾಗಿರುತ್ತದೆ ಯಾರಿಗೂ ಕಾಣದ ದೃಶ್ಯಗಳು ಕಾಣಿಸುವುದು.

## ಬಣಕಲ್ ಬಳಿ ಭೀಕರ ಸರಣಿ ಅಪಘಾತ: ಮೃತ ಕುಟುಂಬಗಳಿಗೆ ತಲಾ 2 ಲಕ್ಷ ಘೋಷಣೆ: ಸಚಿವ

» **ಚಿತ್ರದುರ್ಗ**



ಧರ್ಮಸ್ಥಳಕ್ಕೆ ತೆರಳಿದ್ದವರ ವಾಹನ ಭೀಕರ ಅಪಘಾತಕ್ಕೀಡಾಗಿ ಜಿಲ್ಲೆಯ ಹೊಳಲ್ಕೆರೆ ತಾಲ್ಲೂಕಿನ ಚನ್ನಪಟ್ಟಣ ಗ್ರಾಮದ ಒಂದೇ ಕುಟುಂಬದ ನಾಲ್ವರು ಮೃತರಾಗಿದ್ದು, ಅಪಘಾತದಲ್ಲಿ ಮೃತರಾದ ಕುಟುಂಬದವರಿಗೆ ತಲಾ ಎರಡು ಲಕ್ಷ ರೂಪಾಯಿಗಳ ಪರಿಹಾರವನ್ನು ಮುಖ್ಯಮಂತ್ರಿಗಳ ಪರಿಹಾರನಿಧಿಯಿಂದ ಕೊಡಿಸುವುದಾಗಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಘೋಷಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲ್ಲೂಕಿನ ಬಣಕಲ್ ಸಮೀಪದ ರಾಷ್ಟ್ರೀಯ ಹೆದ್ದಾರಿಯಲ್ಲಿ ನಡೆದ ಲಾರಿ ಮತ್ತು ಕಾರುಗಳ ನಡುವೆ ನಡೆದ ಭೀಕರ ಸರಣಿ ಅಪಘಾತದಲ್ಲಿ ಚಿತ್ರದುರ್ಗ ಮೂಲದ ನಾಲ್ಕು ಮಂದಿ ಸ್ಥಳದಲ್ಲೇ ಮೃತಪಟ್ಟು, ಆರು ಜನರಿಗೆ ಸಾಮಾನ್ಯ ಸ್ವರೂಪದ ಗಾಯಗಳಾಗಿದ್ದವು. ಗಂಭೀರವಾಗಿ ಗಾಯಗೊಂಡ ಮೂವರನ್ನು ಮಂಗಳೂರು ಆಸ್ಪತ್ರೆಗೆ ರವಾನಿಸಲಾಗಿತ್ತು. ಈ ಆಕಸ್ಮಿಕ ದುರ್ಘಟನೆಯಲ್ಲಿ ಮೃತರಾದ ಕುಟುಂಬದರಿಗೆ ತಲಾ ಎರಡು ಲಕ್ಷ ರೂಪಾಯಿಗಳ ಪರಿಹಾರವನ್ನು ಮಾನ್ಯ ಮುಖ್ಯಮಂತ್ರಿಗಳ ಪರಿಹಾರನಿಧಿಯಿಂದ ಕೊಡಿಸುವುದಾಗಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರು ಘೋಷಿಸಿದ್ದಾರೆ. ಹಂಪಯ್ಯ(62), ಪ್ರೇಮಾ(58), ಮಂಜಯ್ಯ(60), ಪ್ರಭಾಕರ್(40) ಈ ನಾಲ್ವರು ಮೃತ ದುರ್ದೈವಿಗಳಾಗಿದ್ದು, ಚಿತ್ರದುರ್ಗ ಹೊಳಲ್ಕೆರೆ ತಾಲೂಕಿನ ಚನ್ನಪಟ್ಟಣ ಗ್ರಾಮದವರೆಂದು ಗುರುತಿಸಲಾಗಿದೆ.

ಪುಟ 3

### ಪ್ರಮುಖ ಸುದ್ದಿ

# ಲಕ್ಕೂರ ಆನಂದರ ಸಾಹಿತ್ಯ ಕೃಷಿ ನಾಡಿಗೆ ಪರಿಚಯಿಸಬೇಕಿದೆ

» **ಚಿತ್ರದುರ್ಗ**



'ಕೇಂದ್ರ ಸಾಹಿತ್ಯ ಅಕಾಡೆಮಿ ಯುವ ಪ್ರಶಸ್ತಿ ಪುರಸ್ಕೃತ ಕವಿ, ಬರಹಗಾರ ಆನಂದ್ ಸಿ.ಲಕ್ಕೂರು ಮಾಡಿರುವ ಸಾಹಿತ್ಯ ಕೃಷಿಯನ್ನು ನಾಡಿಗೆ ವಿಸ್ತೃತವಾಗಿ ಪರಿಚಯಿಸಬೇಕಾದ ಅಗತ್ಯ ಇದೆ' ಎಂದು ಅಂಬೇಡ್ಕರ್ ವಾದಿ ಚಿಂತಕ ಡಾ.ಹುಲಿಕುಂಟೆ ಮೂರ್ತಿ ಹೇಳಿದರು.

ನಗರದ ಪತ್ರಕರ್ತರ 'ವನದಲ್ಲಿ 'ಭಾನುವಾರ ಬಿಕೆ–ಕೆಬಿ ಬಳಗ ಮತ್ತು ಲಂಕೇಶ್ ವಿಚಾರ ವೇದಿಕೆಯಿಂದ ಆಯೋಜಿಸಿದ್ದ 'ಲಕ್ಕೂರು ಆನಂದ ಒಂದು ನೆನಪು' ಕಾರ್ಯಕ್ರಮದಲ್ಲಿ ಮಾತನಾಡಿದರು.

'ಯುವ ಬರಹಗಾರ ಆನಂದ್ ತನ್ನ ವಯಸ್ಸಿಗೆ ಸಾಹಿತ್ಯ, ಸಂಶೋಧನೆ, ಕಾವ್ಯದಲ್ಲಿ ಮಾಡಿರುವ ಕೆಲಸವನ್ನು ದಶಕಗಳ ಕಾಲ ಬದುಕಿರುವ ಕವಿ, ಸಾಹಿತಿಗಳು ಮಾಡಿ ತೋರಿಸಲಿ. ಆನಂದ್ ಬದುಕಿನ ದಾರಿ ಒಂದಿತ್ತು. ಅದನ್ನು ಗ್ರಹಿಸದೇ ಚಾರಿತ್ರ್ಯಹರಣ ಮಾಡುವವರು ಒಮ್ಮೆ ಆತ್ಮಾವಲೋಕನ ಮಾಡಿಕೊಳ್ಳಲಿ. ಆನಂದ್‌ರಂತ ಪ್ರತಿ'ಯನ್ನು ಬಿತ್ತು ಬೆಳೆಯುವುದು ನಮಗೆ ಗೊತ್ತಿದೆ' ಎಂದರು.

ಪ್ರಾಧ್ಯಾಪಕವಿ.ಎಲ್.ನರಸಿಂಹಮೂರ್ತಿ ಮಾತನಾಡಿ'ಪ್ರತಿಯೊಬ್ಬ ಬರಹಗಾರ ನಾರ್ಸಿಸ್ಟ್ ಆಗಿರುತ್ತಾನೆ. ಆನಂದ್ ಕೂಡಾ ಮಹತ್ವಾಕಾಂಕ್ಷಿಯಾಗಿದ್ದ. ಶೋಷಿತ ಸಾಮಾಜಿಕ ಹಿನ್ನೆಲೆಯ ಆನಂದ್‌ಗೆ ನನ್ನ ಬರಹಗಳನ್ನು ಗುರುತಿಸಬೇಕು. ಮೆಚ್ಚುಗೆ ಸೂಚಿಸಬೇಕು ಅನ್ನುವ ಮನೋಧೋರಣೆ ಇತ್ತು. ಇದು ತಪ್ಪಲ್ಲ. ಆತ ಮಾಡಿರುವ ಕಾವ್ಯ, ಸಂಶೋಧನೆ ಬಗ್ಗೆ ಹೆಚ್ಚು ಚರ್ಚೆಯಾಗಬೇಕಿದೆ' ಎಂದರು.

ಆಧುನಿಕ ರಂಗಕರ್ಮಿ ಕೆ.ಪಿ.ಲಕ್ಷ್ಮಣ್ ಮಾತನಾಡಿ'ಹಳ್ಳಿಯ ಜಾತಿ ವ್ಯವಸ್ಥೆ ತನಗೆ ಅನವಾದ ಜಾತಿಗಳು ಹೇಗೆ ವರ್ತಿಸಬೇಕು, ನಡೆದುಕೊಳ್ಳಬೇಕು ಎಂದು ನಿರ್ದೇಶಿಸುತ್ತದೆ.

ಈ ಜಾತಿಯ ವಿಕಾರ ಈಗ ಕನ್ನಡ ಸಾಂಸ್ಕೃತಿಕ ಲೋಕಕ್ಕೂ ವಿಸ್ತರಿಸಿದೆ. ಆನಂದ್‌ರ ಸಾವಿನ ಸುತ್ತ ವ್ಯಕ್ತವಾದ ಅಭಿಪ್ರಾಯಗಳು ಇದನ್ನು ಹೇಳುತ್ತಿವೆ. ಇದು ಬದಲಾಗಬೇಕು' ಎಂದು ಹೇಳಿದರು.

ಕನ್ನಡ ಪುಸ್ತಕ ಪ್ರಾಧಿಕಾರದ ಸದಸ್ಯ ಡಾ.ರವಿಕುಮಾರ್ ನೀಹಾ ಮಾತನಾಡಿ'ಆನಂದ್ ಅದ್ಭುತ ಜೀವನ ಪ್ರೀತಿಯ ಗೆಳೆಯ. ಸದಾ ಕಾವ್ಯ, ಕಾದಂಬರಿಗಳು ಕುರಿತು ಮಾತನಾಡುತ್ತಿದ್ದ. ಮಾತಂಗ ಮಹಿಳಾ ಸಂಸ್ಕೃತಿ ಕುರಿತು ಅದ್ಭುತ ಪುಸ್ತಕ ಬರೆದಿದ್ದ. ಹೊಸ ಸಂಶೋ'ನಾ ಮಾದರಿಗಳನ್ನು ಹುಡುಕುತ್ತಿದ್ದ. ಆತನ ಸಂಶೋಧನೆಯ ದಾರಿ, ಅಧ್ಯಯನ ಮಾಡುವ ಪ್ರಕ್ರಿಯೆ ವಿಭಿನ್ನವಾಗಿತ್ತು' ಎಂದರು.

ತುಮಕೂರು ವಿವಿ ಪ್ರಾಧ್ಯಾಪಕ ಡಾ.ಬಗ್ಗನಡು ನಾಗಭೂಷಣ ಮಾತನಾಡಿ'ಆನಂದ್ ಚಿಕ್ಕವಯಸ್ಸಿನಲ್ಲೇ ತೀವ್ರತರವಾಗಿ ಬದುಕಿದ ಬರಹಗಾರ. ಆನಂದ್‌ರ ಬದುಕಿನ ಮೌಲ್ಯಮಾಪನ ಮಾಡುವವರು ನ್ಯಾಯಾಧೀಶರ ಸ್ಥಾನದಲ್ಲೇನೂ ಇರುವುದಿಲ್ಲ. ಮುಂದೊಂದು ದಿನ ಅವರೂ ಮೌಲ್ಯಮಾಪನಕ್ಕೆ ಒಳಗಾಗುತ್ತಾರೆ. ವ್ಯಕ್ತಿಯ ಸಾವನ್ನು ಬಯಸುವವರು ಮತ್ತು ಸಂಭ್ರಮಿಸುವವರಿಗಿಂತ ಸಾವನ್ನು ಅಗೌರವಿಸುವವರು ಅಪಾಯಕಾರಿಗಳು' ಎಂದರು.

ಸಾಮಾಜಿಕ ಹೋರಾಟಗಾರ ಕೊಟ್ಟ ಶಂಕರ್ ಕೋಡಿಹಳ್ಳಿ ಸಂತೋಷ್ ಪ್ರಸ್ತಾವಿಕವಾಗಿ ಮಾತನಾಡಿದರು. ಪ್ರಗತಿಪರ ಚಿಂತಕ ಜೆ.ಯಾದವರೆಡ್ಡಿ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ದಿನೇಶ್ ಗೌಡಗೆರೆ, ಜಡೇಕುಂಟೆ ಮಂಜುನಾಥ್, ಹೊಳೆಯಪ್ಪ ಸಾಕ್ಯ ಇದ್ದರು.

## ಫಾಸ್ಟ್ ನ್ಯೂಸ್

### ಸಾಗರೋತ್ತರ ವಿದ್ಯಾರ್ಥಿ ವೇತನಕ್ಕೆ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಂದ ಅರ್ಜಿ

» **ಚಿತ್ರದುರ್ಗ**

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಭಾರತ ಸರ್ಕಾರದ ಬುಡಕಟ್ಟು ವ್ಯವಹಾರಗಳ ಸಚಿವಾಲಯವು 2024-25 ನೇ ಸಾಲಿನ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಂದ ರಾಷ್ಟ್ರೀಯ ಸಾಗರೋತ್ತರ ವಿದ್ಯಾರ್ಥಿ ವೇತನ ಯೋಜನೆಗೆ(ಓಔಖ) ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ. ಅರ್ಜಿ ಸಲ್ಲಿಸಲು ಮೇ 31 ಕೊನೆಯ ದಿನವಾಗಿದೆ. ರಾಷ್ಟ್ರೀಯ ಸಾಗರೋತ್ತರ ಅರ್ಜಿಗಳನ್ನು ಸಲ್ಲಿಸಲು 20 ವಿದ್ಯಾರ್ಥಿಗಳಿಗೆ ಮಾತ್ರ ಅವಕಾಶವಿರುತ್ತದೆ. ಸಾಗರೋತ್ತರ ಪದವಿ, ಪಿ.ಹೆಚ್.ಡಿ ಉನ್ನತ ವ್ಯಾಸಾಂಗಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ನೀಡಲಾಗುತದೆ. ಆಸಕ್ತ ಅಭ್ಯರ್ಥಿಗಳು **https://overseas.tribal.gov.in** ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಓ.ಪರಮೇಶ್ವರಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಜಿಲ್ಲೆಯಲ್ಲಿ 31810 ಕ್ವಿಂಟಲ್ ಬಿತ್ತನೆ ಬೀಜ ದಾಸ್ತಾನು:

### 13 ಹೆಚ್ಚುವರಿ ಬಿತ್ತನೆ ಬೀಜ ವಿತರಣಾ ಕೇಂದ್ರ ಸ್ಥಾಪನೆ

» **ಚಿತ್ರದುರ್ಗ**

2024-25 ನೇ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆಗೆ ಜಿಲ್ಲೆಯಲ್ಲಿ ಒಟ್ಟು 31810 ಕ್ವಿಂಟಾಲ್ ಬಿತ್ತನೆ ಬೀಜ ದಾಸ್ತಾನು ಮಾಡಲಾಗಿದೆ. ಸೂಕ್ತ ವಿತರಣೆಗಾಗಿ ಹೋಬಳಿ ಮಟ್ಟದ 22 ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಇದರೊಂದಿಗೆ ಚಳ್ಳಕೆರೆ ತಾಲ್ಲೂಕಿನ ಸಾಣಿಕೆರೆ, ಪರಶುರಾಂಪುರ, ನಾಯಕನಹಟ್ಟಿ, ದೊಡ್ಡಉಳ್ಳಾರ್ತಿ, ದೇವರಡ್ಡಿಹಳ್ಳಿ, ತಳಕು ಹಾಗೂ ರೇಣುಕಾಪುರದ ಎಫ್‌ಪಿಓ, ಹಿರಿಯೂರು ತಾಲ್ಲೂಕಿನ ಯರಬಳ್ಳಿ, ಅಬ್ಬಿನಹೊಳೆ ಮತ್ತು ಧರ್ಮಪುರ ಹಾಗೂ ಮೊಳಕಾಲ್ಮೂರು ತಾಲ್ಲೂಕಿನ ರಾಂಪುರ ಮತ್ತು ತಾಲ್ಲೂಕಿನ ಒಂದು ಎಫ್‌ಪಿಓ ಮತ್ತು ಒಂದು ಕೆಓಎಫ್‌ನ ವಿತರಣಾ ಕೇಂದ್ರ ಸೇರಿದಂತೆ ಒಟ್ಟು 13 ಹೆಚ್ಚುವರಿ ಬಿತ್ತನೆ ಬೀಜ ವಿತರಣಾ ಕೇಂದ್ರಗಳನ್ನು ತೆರೆಯಲಾಗಿದೆ. ಜಿಲ್ಲೆಯಲ್ಲಿ 32526 ಮೆ.ಟನ್‌ನಷ್ಟು ವಿವಿಧ ಗ್ರೇಡ್‌ನ ರಸಗೊಬ್ಬರ ದಾಸ್ತಾನಿದೆ. ರೀತಿಯ ರಸಗೊಬ್ಬರ ಮತ್ತು ಬಿತ್ತನೆ ಬೀಜದ ಕೊರತೆ ಇಲ್ಲ ರೈತರು ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ಹಾಗೂ ಗೊಬ್ಬರು ಪಡೆಯಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿ

» **ಚಿತ್ರದುರ್ಗ**

ಜಿಲ್ಲಾ ವೀರಶೈವ ಲಿಂಗಾಯತ ಹೇಮರಡ್ಡಿ ಮಲ್ಲಮ್ಮ ಸಮಾಜದಿಂದ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭ ಮೇ.29 ರಂದು ಬೆಳಿಗ್ಗೆ 11-30 ಕ್ಕೆ ನೀಲಕಂಠೇಶ್ವರ ಸಮುದಾಯ ಭವನದಲ್ಲಿ ನಡೆಯಲಿದೆ. 9 ಗಂಟೆಗೆ ಹೇಮರಡ್ಡಿ ಮಲ್ಲಮ್ಮನ ಭಾವಚಿತ್ರ ಮೆರವಣಿಗೆ. ಜಿಲ್ಲಾ ವೀರಶೈವ ಲಿಂಗಾಯತ ಹೇಮರಡ್ಡಿ ಮಲ್ಲಮ್ಮ ಸಮಾಜದ ರಾಜ್ಯಾಧ್ಯಕ್ಷ ಶೇಖರಗೌಡ ಮಾಲಿ ಪಾಟೀಲ್ ಸಮಾರಂಭ ಉದ್ಘಾಟಿಸಲಿದ್ದಾರೆ. ಜಿಲ್ಲಾ ವೀರಶೈವ ಲಿಂಗಾಯತ ಹೇಮರಡ್ಡಿ ಮಲ್ಲಮ್ಮ ಸಮಾಜದ ಜಿಲ್ಲಾಧ್ಯಕ್ಷ ಜಿ.ಚಿದಾನಂದಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ವೀರಶೈವ ಲಿಂಗಾಯತ ಹೇಮರಡ್ಡಿ ಮಲ್ಲಮ್ಮ ಸಮಾಜದ ಗೌರವಾಧ್ಯಕ್ಷ ನಾಗಿರೆಡ್ಡಿ, ಹೆಚ್.ಮಹೇಶ್ವರಪ್ಪ ಇವರುಗಳು ಪಾಲ್ಗೊಳ್ಳಲಿದ್ದಾರೆ. ನಿವೃತ್ತ ವಿಷಯ ಪರಿವೀಕ್ಷಕ ಶಿವಪ್ರಸಾದ್ ಉಪನ್ಯಾಸ ನೀಡುವರು. ಸಮಾರಂಭದ ನಂತರ ಸರ್ವ ಸದಸ್ಯರ ಸಾಮಾನ್ಯ ಸಭೆ ನಡೆಯಲಿದೆ. ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಜಿಲ್ಲಾ ವೀರಶೈವ ಲಿಂಗಾಯತ ಹೇಮರಡ್ಡಿ ಮಲ್ಲಮ್ಮ ಸಮಾಜದ ಪ್ರಧಾನ ಕಾರ್ಯದರ್ಶಿ ಡಿ.ಟಿ.ಶಿವಾನಂದಪ್ಪ ವಿನಂತಿಸಿದ್ದಾರೆ.

### ವಿಧಾನ ಪರಿಷತ್ತಿನಲ್ಲಿ ಬಹುಮತಕ್ಕೆ ಎಂಎಲ್ಸಿ ಚುನಾವಣೆ ಗೆಲುವು ಅಗತ್ಯ: ಡಾ.ಪಿ.ಎಂ.ಮಂಜುನಾಥ

» **ಮೊಳಕಾಲ್ಮುರು**

ವಿಧಾನ ಪರಿಷತ್ತಿನಲ್ಲಿ ಬಹುಮತಕ್ಕೆ ಆಗ್ನೇಯ ಶಿಕ್ಷಕರ ಕ್ಷೇತ್ರ ಚುನಾವಣೆ ಮಹತ್ವದಾಗಿದ್ದು, ವೈ.ಎ.ನಾರಾಯಣಸ್ವಾಮಿ ಅವರನ್ನು ಗೆಲ್ಲಿಸುವುದು ಅಗತ್ಯವಾಗಿರುತ್ತದೆ ಮೊದಲಿನಿಂದಲೂ ಶಿಕ್ಷಕರ, ಪದವೀಧರರ ಒಲವು ಬಿಜೆಪಿ ಮೇಲೆ ಇದೆ, ನಮ್ಮ ಅಭ್ಯರ್ಥಿ ವೈ.ಎ ನಾರಾಯಣಸ್ವಾಮಿಯವರು ಶಿಕ್ಷಕರ ಕ್ಷೇತ್ರದಿಂದ ಗೆದ್ದಿದ್ದಲ್ಲದೆ ಅವರ ಆಗುಹೋಗುಗಳಿಗೆ, ಸಮಸ್ಯೆಗಳಿಗೆ ಸ್ಪಂದಿಸಿ ಅವರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದಾರೆ. ಕಾಂಗ್ರೆಸ್ ಸರ್ಕಾರ ಮತ್ತು ಅವರ ಶಿಕ್ಷಣ ಸಚಿವರ ಎಡವಟ್ಟು ಇತ್ತೀಚಿನ ಎಸ್‌ಎಸ್‌ಎಲ್ಸಿ ಪರೀಕ್ಷೆಯಲ್ಲಿ ಬಯಲಾಗಿದೆ. ಇವೆಲ್ಲಾವೂ ಕಾಂಗ್ರೆಸ್ ಸರ್ಕಾರದಲ್ಲಿ ಶಿಕ್ಷಕರ ಮತ್ತು ಶಿಕ್ಷಣ ಕ್ಷೇತ್ರದ ಬಗೆಗಿನ ಅಸಡ್ಡೆ ತೋರಿಸುತ್ತದೆ ಎಂದರು.ಪ್ರತಿ ಪಂಚಾಯಿತಿವಾರು ಮುಖಂಡರು ಆಯಾ ಪಂಚಾಯಿತಿ, ಹೋಬಳಿಯಲ್ಲಿ ಬರುವ ಮತದಾರ ಶಿಕ್ಷಕರನ್ನು ಖುದ್ದು ಭೇಟಿಯಾಗಿ, ಮತಯಾಚನೆ ಮಾಡಿ ನಮ್ಮ ಅಭ್ಯರ್ಥಿ ಗೆಲುವಿಗೆ ಶ್ರಮಿಸೋಣ ಎಂದರು.

# ಶಿಕ್ಷಣ ವಿರೋಧಿ, ವಿದ್ಯಾರ್ಥಿಗಳಿಗೆ ದ್ರೋಹ ಬಗೆಯುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ತಕ್ಕ ಪಾಠ ಕಲಿಸಿ: ಸಿ.ಟಿ.ರವಿ ಕರೆ

» **ಚಿತ್ರದುರ್ಗ**

ಶಿಕ್ಷಣ ವಿರೋಧಿ, ವಿದ್ಯಾರ್ಥಿಗಳಿಗೆ ದ್ರೋಹ ಬಗೆಯುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ತಕ್ಕ ಪಾಠ ಕಲಿಸಬೇಕಾದರೆ ಈ ಬಾರಿಯ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಬಿಜೆಪಿ. ಅಭ್ಯರ್ಥಿ ಡಾ.ವೈ.ಎ.ನಾರಾಯಣಸ್ವಾಮಿರವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಗೆಲ್ಲಿಸುವಂತೆ ಬಿಜೆಪಿ. ರಾಷ್ಟ್ರೀಯ ಮಾಜಿ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ ಶಿಕ್ಷಕರುಗಳಲ್ಲಿ ವಿನಂತಿಸಿದರು.

ಚಳ್ಳಕೆರೆ ರಸ್ತೆಯಲ್ಲಿರುವ ವಿನಾಯಕ ಕಲ್ಯಾಣ ಮಂಟಪದಲ್ಲಿ ಆಗ್ನೇಯ ಶಿಕ್ಷಕರ ಕ್ಷೇತ್ರದ ಅಭ್ಯರ್ಥಿ ವೈ.ಎ.ನಾರಾಯಣಸ್ವಾಮಿರವರ ಪರ ಹಮ್ಮಿಕೊಳ್ಳಲಾಗಿದ್ದ ಮತ ಪ್ರಚಾರ ಸಭೆ ಉದ್ಘಾಟಿಸಿ ಮಾತನಾಡಿದರು.

ಶಿಕ್ಷಕರ ಬಲ ಹೊಂದಿರುವ ವೈ.ಎ.ನಾರಾಯಣಸ್ವಾಮಿ ಹಾಗೂ ಹಣ ಬಲವುಳ್ಳ ಕಾಂಗ್ರೆಸ್ ಅಭ್ಯರ್ಥಿ ನಡುವೆ ನಡೆಯುತ್ತಿರುವ ಈ ಚುನಾವಣೆಯಲ್ಲಿ ಒಂದೊಂದು ಮತಕ್ಕೂ ಪ್ರಾಮುಖ್ಯತೆಯಿದೆ. ಹಾಗಾಗಿ ಪ್ರಥಮ ಸುತ್ತಿನಲ್ಲಿಯೇ ವೈ.ಎ.ಎನ್. ಗೆಲ್ಲಿಸಿ ತೊಘಲಕ್ ದರ್ಬಾರ್ ನಡೆಸುತ್ತಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ, ಶಿಕ್ಷಣ ಸಚಿವ ಮಧು ಬಂಗಾರಪ್ಪನಿಗೆ ಸಂದೇಶ ಕಳಿಸಬೇಕಿದೆ ಎಂದು ಶಿಕ್ಷಕರುಗಳಲ್ಲಿ ಮನವಿ ಮಾಡಿದರು.

ಅನುದಾನಿತ ಶಾಲೆಗಳು ಮುಚ್ಚುತ್ತಿವೆ. ಓಪಿಎಸ್. ಇನ್ನು ಕೈಸೇರಿಲ್ಲ. ಆತ್ಮನಿರ್ಭರ, ಭಾರತವನ್ನು ವಿಶ್ವಗುರುವಾಗಿಸಲು ಪ್ರಧಾನಿ ಮೋದಿರವರು ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೆ ತಂದಿದ್ದರೆ ಕಾಂಗ್ರೆಸ್ ಸರ್ಕಾರಕ್ಕೆ ಅದು ಬೇಕಿಲ್ಲ. ಶಿಕ್ಷಣದ



ಜೊತೆ ರಾಜಕೀಯವಾಟವಾಡುತ್ತಿದೆ. ಶಿಕ್ಷಕರಿಗೆ ಬರೆ ಎಳೆಯುವ ನೀತಿ ಅನುಸರಿಸುತ್ತಿರುವ ಕನ್ನಡ ಬಾರದ ಶಿಕ್ಷಣ ಸಚಿವರನ್ನು ನಾಡಿಗೆ ಕೊಟ್ಟಂತ ಅಪಕೀರ್ತಿ ಸಿದ್ದರಾಮಯ್ಯನವರಿಗೆ ಸಲ್ಲಬೇಕು ಎಂದು ತರಾಟೆ ತೆಗೆದುಕೊಂಡರು.

ಬಿಜೆಪಿ. ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿ ಶಿಕ್ಷಕರ ಸಮಸ್ಯೆಗಳಿಗೆ ಕಳೆದ ಹದಿನೆಂಟು ವರ್ಷಗಳಿಂದಲೂ ಧ್ವನಿಯಾಗಿ ಕೆಲಸ ಮಾಡುತ್ತಿರುವ ಡಾ.ವೈ.ಎ.ನಾರಾಯಣಸ್ವಾಮಿರವರನ್ನು ಈ ಬಾರಿಯ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಬಹುಮತಗಳಿಂದ ಗೆಲ್ಲಿಸಿ ವಿಧಾನಪರಿಷತ್‌ಗೆ ಕಳಿಸಿಕೊಡಿ. ಕಾಂಗ್ರೆಸ್ ಸರ್ಕಾರ ಶಿಕ್ಷಣ ಕ್ಷೇತ್ರಕ್ಕೆ ಆದ್ಯತೆ ಕೊಟ್ಟಿಲ್ಲ. ಎನ್.ಇ.ಪಿ. ಕಿತ್ತಾಕಿ ಮೊಸರಲ್ಲಿ ಕಲ್ಲು ಹುಡುಕುವ ಕೆಲಸ ಮಾಡುತ್ತಿದೆ. ಶಿಕ್ಷಣ ಕ್ಷೇತ್ರ ಕಲುಷಿತವಾಗಿದೆ. ಶಿಕ್ಷಕರಿಗೆ ಸವಲತ್ತುಗಳನ್ನು ಕೊಡುವ ಕೆಲಸ ಮಾಡಿದ್ದು, ಬಿ.ಎಸ್. ಯಡಿಯೂರಪ್ಪನವರು ಎನ್ನುವುದನ್ನು ಶಿಕ್ಷಕರುಗಳು ಮರೆಯುವಂತಿಲ್ಲ. ಹಾಗಾಗಿ ಈ ಚುನಾವಣೆಯಲ್ಲಿ ಹೋರಾಟಗಾರನನ್ನು ಆಯ್ಕೆ ಮಾಡಬೇಕೆನ್ನುವುದನ್ನು ಮರೆಯಬಾರದೆಂದು ಶಿಕ್ಷಕರುಗಳನ್ನು ಎಚ್ಚರಿಸಿದರು.ಮಾಜಿ ಸಚಿವ ಭೈರತಿ ಬಸವರಾಜ್ ಮಾತನಾಡುತ್ತ ಹದಿನೆಂಟು ವರ್ಷಗಳಿಂದಲೂ ನಿಮ್ಮ ಸಮಸ್ಯೆಗಳಿಗೆ ಧ್ವನಿಯಾಗಿರುವ ವೈ.ಎ.ನಾರಾಯಣಸ್ವಾಮಿರವರಿಗೆ ಈ ಚುನಾವಣೆಯಲ್ಲಿ ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಗೆಲ್ಲಿಸುವಂತೆ ಶಿಕ್ಷಕರುಗಳಲ್ಲಿ ಕೋರಿದರು.ಜೆ.ಡಿ.ಎಸ್.ಜಿಲ್ಲಾಧ್ಯಕ್ಷ ಎಂ.ಜಯಣ್ಣ ಮಾತನಾಡಿ ಆಗ್ನೇಯ ಶಿಕ್ಷಕರ ಕ್ಷೇತ್ರದಿಂದ ನಾಲ್ಕನೆ ಬಾರಿಗೆ ಸ್ಪರ್ಧಿಸುತ್ತಿರುವ ವೈ.ಎ.ನಾರಾಯಣಸ್ವಾಮಿ ಶಿಕ್ಷಕರ ಕಷ್ಟ-ಸುಖದಲ್ಲಿ ಮೊದಲಿನಿಂದಲೂ ಭಾಗಿಯಾಗುತ್ತ ಬರುತ್ತಿದ್ದಾರೆ. ಶಿಕ್ಷಕರುಗಳಿಗೆ ನಿಜವಾಗಿಯೂ ಶಕ್ತಿ ಬರಬೇಕಾಗಿರುವುದರಿಂದ ಈ ಚುನಾವಣೆ ಅತ್ಯಂತ ಮಹತ್ವದ್ದು, ಹಣ ಬಲವೋ ಶಿಕ್ಷಕರು ಬಲವೋ ಎನ್ನುವುದನ್ನು ನೀವುಗಳು ತೀರ್ಮಾನಿಸಬೇಕೆಂದು ಶಿಕ್ಷಕರುಗಳಲ್ಲಿ ಕೇಳಿಕೊಂಡರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳ ಮಾತನಾಡುತ್ತ ಐದನೆ ವೇತನ ಆಯೋಗ ಒಪ್ಪಿಕೊಂಡಿದ್ದು, ರಾಜ್ಯದ ಮುಖ್ಯಮಂತ್ರಿಯಾಗಿದ್ದ ಬಿ.ಎಸ್. ಯಡಿಯೂರಪ್ಪನವರು. ಕಾಂಗ್ರೆಸ್ ಸರ್ಕಾರ ಎಂದಿಗೂ ಶಿಕ್ಷಕರುಗಳ ಪರವಾಗಿಲ್ಲ. ನೌಕರರ ವಿರೋಧಿ. ಮುಖ್ಯಮಂತ್ರಿ ಸಿದ್ದರಾಮಯ್ಯ ಏಳನೆ ವೇತನ ಆಯೋಗವನ್ನು ಒಪ್ಪಿಕೊಂಡಿಲ್ಲ. ಬಡ ಮಕ್ಕಳು, ನೌಕರರ ಪರವಾಗಿರುವ ವೈ.ಎ.ನಾರಾಯಣಸ್ವಾಮಿರವರನ್ನು ಗೆಲ್ಲಿಸಿ ಎಂದು ಶಿಕ್ಷಕರುಗಳಲ್ಲಿ ಮನವಿ ಮಾಡಿದರು.

ಆಗ್ನೇಯ ಶಿಕ್ಷಕರ ಕ್ಷೇತ್ರದ ಅಭ್ಯರ್ಥಿ ವೈ.ಎ.ನಾರಾಯಣಸ್ವಾಮಿ ಶಿಕ್ಷಕರುಗಳಲ್ಲಿ ಮತ ಯಾಚಿಸಿ ಮಾತನಾಡುತ್ತ ಕಳೆದ ಹದಿನೆಂಟು ವರ್ಷಗಳಿಂದಲೂ ಯಾವುದೇ ಕಪ್ಪು ಚುಕ್ಕೆಯಿಲ್ಲದಂತೆ ನಿಮ್ಮ ಸೇವೆ ಮಾಡಿದ್ದೇನೆ. ಅತಿ ಹೆಚ್ಚು ಅಭಿಮಾನ, ನಂಬಿಕೆ, ಪ್ರೀತಿ ತೋರಿದ್ದೀರ, ಕೊಟ್ಟ ಮಾತಿಗೆ ತಪ್ಪಿಲ್ಲ. ನೀವುಗಳು ಹೇಳಿದ ಕೆಲಸ ಮಾಡಿದ್ದೇನೆ. ಈ ಬಾರಿಯ ಚುನಾವಣೆಯಲ್ಲಿ ಮತ್ತೊಮ್ಮೆ ನನ್ನನ್ನು ಗೆಲ್ಲಿಸಿ ವಿಧಾನಪರಿಷತ್‌ಗೆ ಕಳಿಸಿಕೊಡಿ. ನಿಮ್ಮ ಸಮಸ್ಯೆಗಳಿಗೆ ಸದಾ ಹೋರಾಡುತ್ತೇನೆಂದು ಭರವಸೆ ನೀಡಿದರು.

ಶಿಕ್ಷಣ ಮಂತ್ರಿ ಮಧು ಬಂಗಾರಪ್ಪನವರಿಗೆ ಶಿಕ್ಷಣದ ಬಗ್ಗೆ ಜ್ಞಾನವಿಲ್ಲ. ಮಕ್ಕಳು, ಪೋಷಕರುಗಳು ಕಂಗಾಲಾಗಿದ್ದಾರೆ. ನಿಮ್ಮ ಋಣ ನನ್ನ ಹೆಗಲ ಮೇಲಿದೆ. ವಿರೋಧಿಗಳ ಅಬ್ಬರಕ್ಕೆ ಮಾರು ಹೋಗಬೇಡಿ ಎಂದು ಶಿಕ್ಷಕರುಗಳನ್ನು ಜಾಗೃತಿಗೊಳಿಸಿದರು.

ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಪ್ರಾಸ್ತಾವಿಕವಾಗಿ ಮಾತನಾಡಿ ಗುರು ಪರಂಪರೆಯನ್ನು ಎತ್ತಿಹಿಡಿಯುವ ಸರ್ಕಾರ ಯಾವುದಾದರೂ ಇದ್ದರೆ ಅದು ಬಿಜೆಪಿ. ಆರು ವರ್ಷಗಳ ಕಾಲ ಶಿಕ್ಷಕರುಗಳ ಜೊತೆ ಒಡನಾಟವಿಟ್ಟುಕೊಂಡು ಸಮಸ್ಯೆಗಳಿಗೆ ಧ್ವನಿ ಎತ್ತಬೇಕಾಗಿರುವುದರಿಂದ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆಗೆ ಪ್ರಾಮುಖ್ಯತೆಯಿದೆ. ಮೂರು ಬಾರಿ ಗೆದ್ದು ನಿಮ್ಮ ಸೇವೆ ಮಾಡಿರುವ ವೈ.ಎ.ನಾರಾಯಣಸ್ವಾಮಿರವರನ್ನು ನಾಲ್ಕನೆ ಬಾರಿಗೆ ಗೆಲ್ಲಿಸಿ. ಐದು ಜಿಲ್ಲೆಗಳಲ್ಲಿ ಲೀಡ್ ಕೊಡಿ ಎಂದು ಶಿಕ್ಷಕರುಗಳಲ್ಲಿ ಕೋರಿದರು.

ಮಾಜಿ ಶಾಸಕರುಗಳಾದ ಜಿ.ಹೆಚ್.ತಿಪ್ಪಾರೆಡ್ಡಿ, ಹೆಚ್.ಎಸ್.ಶಿವಶಂಕರ್, ಎಸ್.ತಿಪ್ಪೇಸ್ವಾಮಿ, ಬಿಜೆಪಿ. ಜಿಲ್ಲಾಧ್ಯಕ್ಷ ಎ.ಮುರಳಿ, ನಗರ ಮಂಡಲ ಅಧ್ಯಕ್ಷ ನವೀನ್‌ಚಾಲುಕ್ಯ, ಗ್ರಾಮಾಂತರ ಮಂಡಲ ಅಧ್ಯಕ್ಷ ಕಲ್ಲೇಶಯ್ಯ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಶ್ರೀಮತಿ ಸೌಭಾಗ್ಯ ಬಸವರಾಜನ್, ಚಿದಾನಂದಗೌಡ, ಎಸ್.ಲಿಂಗಮೂರ್ತಿ, ರವೀಂದ್ರಪ್ಪ, ಹನುಮಂತೆಗೌಡ, ಮಲ್ಲಿಕಾರ್ಜುನ್, ತಮ್ಮೇಶ್, ಎನ್.ಆರ್.ಲಕ್ಷ್ಮಿಕಾಂತ್, ಜೆಡಿಎಸ್. ಜಿಲ್ಲಾ ಮಹಾ ಪ್ರಧಾನ ಕಾರ್ಯದರ್ಶಿ ಡಿ.ಗೋಪಾಲಸ್ವಾಮಿ ನಾಯಕ ಇನ್ನು ಅನೇಕರು ವೇದಿಕೆಯಲ್ಲಿದ್ದರು.

## ನೇರ್ಲಗುಂಟೆ ರಾಮಪ್ಪರನ್ನು ಪರಿಷತ್‌ಗೆ ನೇಮಿಸಿ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯ ನೇರ್ಲಗುಂಟೆ ರಾಮಪ್ಪರವರಿಗೆ ಭೋವಿ ಜನಾಂಗದಡಿಯಲ್ಲಿ ವಿಧಾನ ಪರಿಷತ್‌ಗೆ ಸದಸ್ಯರನ್ನಾಗಿ ಮಾಡುವಂತೆ ಶಿಕ್ಷಕರ ಮತ್ತು ಪದವೀಧರರ ರಾಜ್ಯ ಉಪಾಧ್ಯಕ್ಷರಾದ ಕನಕ ಕಾಂಗ್ರೆಸ್ ಮುಖಂಡರನ್ನು ಆಗ್ರಹಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದಅವರು,ನೇರ್ಲಗುಂಟೆ ರಾಮಪ್ಪ ಅವರು ಕಳೆದ 15 ವರ್ಷಗಳಿಂದ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ ಪಕ್ಷ ಸಂಘಟನೆಯಲ್ಲಿ ತೊಡಗಿದ್ದಾರೆ. 2014 ರಿಂದ ನೇರ್ಲಗುಂಟೆ ರಾಮಪ್ಪರವರು ವಿಧಾನ ಪರಿಷತ್ ಸದಸ್ಯ ಸ್ಥಾನಕ್ಕೆ ಪ್ರಯತ್ನ ಮಾಡುತ್ತಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಿಂದ ನಮ್ಮ ಸಮುದಾಯಕ್ಕೆ ಯಾವುದೇ ಕ್ಷೇತ್ರದಲ್ಲೂ ಟಿಕೆಟ್ ನೀಡಿರುವುದಿಲ್ಲ. ರಾಜ್ಯದಲ್ಲಿ ಸಾಮಾಜಿಕ ನ್ಯಾಯವನ್ನು ಒದಗಿಸುವಂತಹ




ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯರವರು ನಮ್ಮ ಸಮುದಾಯಕ್ಕೆ ಸಾಮಾಜಿಕ ನ್ಯಾಯವನ್ನು ಒದಗಿಸಬೇಕು ಎಂದು ಒತ್ತಾಯಿಸಿದ್ದಾರೆ.

ಜೂನ್-13 ರಂದು 11 ಸ್ಥಾನಗಳಿಗೆ ನಡೆಯಲಿರುವ ವಿಧಾನ ಪರಿಷತ್ ಚುನಾವಣೆಯಲ್ಲಿ ನಮ್ಮ ಭೋವಿ ಸಮುದಾಯದ ನೇರ್ಲಗುಂಟೆ ರಾಮಪ್ಪರವರನ್ನು ನಾಮ ನಿರ್ದೇಶನ ಮಾಡಬೇಕು. ಆದ್ದರಿಂದ ಕಾಂಗ್ರೆಸ್ ಪಕ್ಷವು ನಮ್ಮ ಸಮುದಾಯವನ್ನು ಪರಿಗಣಿಸಿ ನಮ್ಮ ಸಮುದಾಯದ ನೇರ್ಲಗುಂಟೆ ರಾಮಪ್ಪರವರನ್ನು ವಿಧಾನಪರಿಷತ್ ಸದಸ್ಯರನ್ನಾಗಿ ನಾಮ ನಿರ್ದೇಶನ ಮಾಡಬೇಕು. ಈ ವಿಚಾರವಾಗಿ ನಮ್ಮ ಸಮುದಾಯದ ಮುಖಂಡರು ಮಾನ್ಯ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಒತ್ತಡ ಹೇರಲಿದ್ದೇವೆ ಎಂದು ಕನಕ ತಿಳಿಸಿದ ರಾಮಪ್ಪರವರಿಗೆ ಲೋಕಸಭಾ ಚುನಾವಣೆಯಲ್ಲಿ ಹಲವಾರು ಬಾರಿ ಟೀಕೇಟ್‌ನ್ನು ಕೇಳಲಾಗಿತ್ತು ಆದರೆ ಕಾಂಗ್ರೆಸ್ ಪಕ್ಷ ನೀಡಿರಲಿಲ್ಲ ಅಲ್ಲದೆ ಈ ಲೋಕಸಭಾ ಚುನಾವಣೆಯ ಸಮಯದಲ್ಲಿಯೂ ಸಹಾ ಭೋವಿ ಸಮುದಾಯಕ್ಕೆ ಚಿತ್ರದುರ್ಗ ಕ್ಷೇತ್ರಕ್ಕೆ ಟೀಕೇಟ್ ನೀಡುವಂತೆ ಮನವಿಯನ್ನು ಮಾಡಲಾಗಿತ್ತು ಆದರೆ ಒಕ್ಷ ನೀಡಲಿಲ್ಲ ಈ ಹಿನ್ನಲೆಯಲ್ಲಿ ವಿಧಾನ ಪರಿಷತ್‌ಗಾದರೂ ನಮ್ಮ ಸಮುದಾಯವರು ಇರಬೇಕಿದೆ ಆದ್ದರಿಂದ ನಮ್ಮ ಸಮುದಾಯದ ಮುಖಂಡರಾದ ನೇರ್ಲಗುಂಟೆ ರಾಮಪ್ಪರವರನ್ನು ವಿಧಾನ ಪರಿಷತ್ ಸದಸ್ಯರನ್ನಾಗಿ ಮಾಡುವಂತೆ ಕಾಂಗ್ರೆಸ್ ಪಕ್ಷದ ಮುಖಂಡರನ್ನು ಆಗ್ರಹಿಸಲಾಯಿತು.

ಗೋಷ್ಟಿಯಲ್ಲಿ ಮುದಸಿರ್ ನವಾಜ್, ತಿಪ್ಪೇಸ್ವಾಮಿ, ಚಿಕ್ಕಂದವಾಡಿ, ತಳಕು ತಾ.ಪಂ. ಮಾಜಿ ಸದಸ್ಯ ಜಿ.ತಿಪ್ಪೇಸ್ವಾಮಿ, ಹೆಚ್.ರವೀಂದ್ರನಾಥ್, ಸುಧಾ ಸೇರಿದಂತೆ ಇತರರು ಭಾಗವಹಿಸಿದ್ದರು.

## ವಿಧಾನಪರಿಷತ್ ಚುನಾವಣೆಗೆ ಎಚ್. ಆಂಜನೇಯನ್ನು ಪರಿಗಣಿಸಲು ಮನವಿ



» **ಚಳ್ಳಕೆರೆ**

ಜಿಲ್ಲೆಯ ಹಿರಿಯ ರಾಜಕಾರಣಿ, ಕಾಂಗ್ರೆಸ್ ಪಕ್ಷದ ಮುತ್ಸದಿ, ಮಾಜಿ ಸಚಿವ ಎಚ್.ಆಂಜನೇಯರವರನ್ನು ವಿಧಾನಪರಿಷತ್ ಸದಸ್ಯರನ್ನಾಗಿ ಆಯ್ಕೆ ಮಾಡಬೇಕೆಂದು ಕಾಂಗ್ರೆಸ್ ಪಕ್ಷದ ಹೈಕಮಾಂಡ್‌ಗೆ ಒತ್ತಾಯಿಸಿರುವುದಾಗಿ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ(ಪರಿವರ್ತನಾವಾದ), ರಾಜ್ಯ ಕಲಾಮಂಡಳಿ ಅಧ್ಯಕ್ಷ ಕೆ.ಟಿ.ಮುತ್ತುರಾಜ್ ತಿಳಿಸಿದರು.

ಅವರು, ಶನಿವಾರ ಅಂಬೇಡ್ಕರ್ ವೃತ್ತದಲ್ಲಿ ಅಂಬೇಡ್ಕರ್ ಪ್ರತಿಮೆ ಬಳಿ ಆಂಜನೇಯರವರ ಭಾವಚಿತ್ರ ಹಿಡಿದು ಮುಂದಿನ ತಿಂಗಳು ವಿಧಾನಸಭೆಯಿಂದ ವಿಧಾನಪರಿಷತ್‌ಗೆ ನಡೆಯುವ ಚುನಾವಣೆಯಲ್ಲಿ ಎಚ್.ಆಂಜನೇಯವರ ಹೆಸರನ್ನು ಪರಿಣಿಸುವಂತೆ ಮನವಿ ಮಾಡಿರುವುದಾಗಿ ತಿಳಿಸಿದರು. ಕಾಂಗ್ರೆಸ್ ಪಕ್ಷದಲ್ಲಿ ಹಲವಾರು ಜವಾಬ್ದಾರಿಯುತ್ತ ಕಾರ್ಯಗಳನ್ನು ನಿಬಾಯಿಸಿದ್ದಾರೆ. ಪಕ್ಷಕ್ಕಾಗಿ ದುಡಿದ ಅವರಿಗೆ ' ಸೂಕ್ತ ಸ್ಥಾನ ನೀಡಬೇಕೆಂದರು. ಜಿಲ್ಲಾಧ್ಯಕ್ಷ ಹೆಗ್ಗೆರೆಮಂಜುನಾಥ, ಅಂಜಿನಪ್ಪ, ಶ್ರವಣಕುಮಾರ್, ತಿಪ್ಪೇಸ್ವಾಮಿ ಮುಂತಾದವರು ಇದ್ದರು.

## ಮದುವೆಯಾಗುವ ಆಮೀಷವೊಡ್ಡಿ ಅತ್ಯಾಚಾರ: ಮನನೊಂದ ಅಪ್ರಾಪ್ತ ಬಾಲಕಿ ನೇಣಿಗೆ ಶರಣು

» **ಚಳ್ಳಕೆರೆ**

ತನ್ನಮೇಲೆ ನಡೆದ ಲೈಂಗಿಕ ದೌರ್ಜನ್ಯಕ್ಕೆ ಮನನೊಂದು ಅಪ್ರಾಪ್ತ ಬಾಲಕಿ, ಪಿಯುಸಿ ವಿದ್ಯಾರ್ಥಿನಿ ತನ್ನ ಮನೆಯಲ್ಲೇ ನೇಣು ಹಾಕಿಕೊಂಡು ಮೃತಪಟ್ಟ ಘಟನೆ ಭರಮಸಾಗರ ಗ್ರಾಮದಲ್ಲಿ ನಡೆದಿದೆ. ಮೃತಳ ತಾಯಿ ಆರ್. ಕಮಲ ಈ ಬಗ್ಗೆ ದೂರು ನೀಡಿ, ನನ್ನ ಮಗಳಿಗೆ 17 ವರ್ಷ ವಯಸ್ಸಾಗಿದ್ದು, ಪ್ರಥಮ ಪಿಯುಸಿ ವ್ಯಾಸಂಗ ಮಾಡುತ್ತಿದ್ದಳು. ಅದೇ ಗ್ರಾಮದ ದೇವರಾಜ ಎಂಬ ಯುವಕ ಮದುವೆಯಾಗುವ ಆಮೀಷವೊಡ್ಡಿ ಅವಳನ್ನು ಬಲವಂತದಿಂದ ಕರೆದುಕೊಂಡು ಆಕೆಯೊಂದಿಗೆ ದೈಹಿಕ ಸಂಪರ್ಕ ಬೆಳೆಸಿದ್ದು, ಇದರಿಂದ ನೊಂದ ಬಾಲಕಿ ಮಾನಸಿಕವಾಗಿ ಕಿನ್ನತೆಗೆ ಒಳಗಾಗಿ ತನ್ನ ಮನೆಯಲ್ಲಿ ಸೀರೆಯಿಂದ ನೇಣು ಹಾಕಿಕೊಂಡು ಮೃತಪಟ್ಟಿದ್ಧಾಳೆ. ಪಿಎಸ್ಐ ಕೆ.ಸತೀಶ್‌ನಾಯ್ಕ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

**ಪ್ರಮುಖ ಸುದ್ದಿ**

# ಮಹಿಳೆಯರ ಸ್ವಾವಲಂಬನೆಗೆ ಟೈಲರ್ ತರಬೇತಿ ನೆರವು

» **ಹೊಸದುರ್ಗ**

ಮಹಿಳೆಯರ ಸ್ವಾವಲಂಬಿ ಬದುಕಿಗೆ ಟೈಲರ್ ತರಬೇತಿಯನ್ನು ಪಡೆದುಕೊಳ್ಳಬೇಕು. ಆಗ ಮಾತ್ರ ಹೆಣ್ಣು ಸಮಾಜದ ಮುಖ್ಯಸ್ಥರಕ್ಕೆ ಬರಲು ಸಾಧ್ಯವಾಗುವುದು. ಸ್ವಾವಲಂಬಿ ದುಡಿಮೆ ಕಲಿತ ಹೆಣ್ಣು ಏನನ್ನಾದರೂ ಸಾಧಿಸಬಹುದು. ಇದರಿಂದ ಆರ್ಥಿಕವಾಗಿ ತಮ್ಮ ಮಕ್ಕಳ ಭವಿಷ್ಯ ರೂಪಿಸಲು ಸಾಧ್ಯವಾಗುವುದು ಎಂದು ಪುರಸಭಾ ಸದಸ್ಯ ಡಾ.ಸ್ವಾತಿ ಪ್ರದೀಪ್ ತಿಳಿಸಿದರು.

ಪಟ್ಟಣದ ಸಮರ್ಥ್ ಕರ್ನಾಟಕ ರಾಜ್ಯ ಜವಳಿ ಹಾಗೂ ಮೂಲಸೌಕರ್ಯ ಅಭಿವೃದ್ಧಿ ನಿಗಮ ಮತ್ತು ಮಹರ್ಷಿ ವಾಲ್ಮೀಕಿ ವೃತ್ತಿ ಮತ್ತು ಕೌಶಲ್ಯ ತರಬೇತಿ ಸಂಸ್ಥೆಯ ಸಹಯೋಗದೊಂದಿಗೆ ನಡೆದ ಟೈಲರಿಂಗ್ ತರಬೇತಿದಾರರಿಗೆ ಪ್ರಮಾಣ ಪತ್ರ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಒಂದು ಕುಟುಂಬದ ನಿರ್ವಹಣೆಯಲ್ಲಿ ಮಹಿಳೆಯರ ಪಾತ್ರ ಅತಿ ಮುಖ್ಯವಾಗಿರುತ್ತದೆ. ಹಿಂದಿನ ಪುರುಷ ಪ್ರಧಾನ ಸಮಾಜದಲ್ಲಿ ಮಹಿಳೆ ಮನೆ



ಕೆಲಸದವಳಾಗಿ ಕರ್ತವ್ಯ ನಿರ್ವಹಿಸುತ್ತಿದ್ದಳು ಆದರೆ ಪ್ರಸ್ತುತ ಸಂದರ್ಭದಲ್ಲಿ ಮಹಿಳೆ ಸಮಾಜದ ಎಲ್ಲ ಸ್ಥಳದಲ್ಲಿಯೂ ಕೆಲಸ ಮಾಡುತ್ತಿದ್ದಾಳೆ ರಾಜಕೀಯ ಸಾಮಾಜಿಕ ಧಾರ್ಮಿಕ ಕಾರ್ಯಗಳ ಜೊತೆ ಜೊತೆಗೆ ಕುಟುಂಬದ ಎಲ್ಲಾ ಜವಾಬ್ದಾರಿಗಳನ್ನ ನಿರ್ವಹಿಸುವ ಮಹಾನ್ ಸಾಧಕಿಯಾಗಿದ್ದಾಳೆ ಎಂದರು.ಯುವ ಉದ್ಯಮಿ ಸದ್ಗುರು ಡಿ.ಎಸ್.ಪ್ರದೀಪ್ ಮಾತನಾಡಿ, ಟೈಲರಿಂಗ್ ತರಬೇತಿಯಲ್ಲಿ ಮಹಿಳೆಯರು ಕೇವಲ ಸರ್ಟಿಫಿಕೇಟ್ ತರಬೇತಿ ಪಡೆಯಲು ಬರಬಾರದು, ಬದಲಾಗಿ ಅನುಭವಿ ತರಬೇತಿ ಅಧಿಕಾರಿಗಳಿಂದ ಕೌಶಲ್ಯವನ್ನು ಕಲಿತು ಗುಣಮಟ್ಟದ ಬಟ್ಟೆ ಹೊಲಿಗೆ ಮಾಡಿದಾಗ ಹೆಚ್ಚು ಹೆಚ್ಚು ಗ್ರಾಹಕರು ನಿಮ್ಮನ್ನು ತಲುಪಲು ನೀವು ಪರಿಣಿತರಾಗಬೇಕು.ಯಾವುದೇ ವೃತ್ತಿಯಲ್ಲಿ ಮೊದಲು ನಮ್ಮಲ್ಲಿಗೆ ಬರುವ ಗ್ರಾಹಕರನ್ನ ಸೌಜನ್ಯದಿಂದ ಮಾತನಾಡಿಸಿ ನಮ್ಮ ಹೊಲಿಗೆ ಕೆಲಸದಲ್ಲಿ ನೈಕುಣ್ಯತೆ ಇದ್ದು ಅವರ ಮನಸ್ಸನ್ನು ಪರಿವರ್ತಿಸಿದಾಗ ಯಾವುದೇ ವ್ಯವಹಾರಗಳು ಅಭಿವೃದ್ಧಿಯಾಗಬಲ್ಲವು. ಸರ್ಕಾರದ ಯೋಜನೆಗಳು ಜನಸಾಮಾನ್ಯರಿಗೆ ತಲುಪುವಂತಾಗಬೇಕು ಆಗ ಇಂತಹ ಸೇವೆಗಳಿಗೆ ನಿಜವಾದ ಅರ್ಥ ಬರುತ್ತದೆ ಎಂದರು.ಈ ಕಾರ್ಯಕ್ರಮದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಉಡುಪಿ ಮತ್ತು ಕೌಶಲ್ಯ ತರಬೇತಿ ಸಂಸ್ಥೆಯ ಅಧ್ಯಕ್ಷೆ ಅಶೋಕ್ ಕಾರ್ಯದರ್ಶಿ ಶಶಿಕಲಾ ಅಶೋಕ್ ಪುರಸಭಾ ಮಾಜಿ ಸದಸ್ಯೆ ಸವಿತಾ ರಮೇಶ್, ಗೋಪಾಲಕೃಷ್ಣ, ನಿಂಗಪ್ಪ ಹಾಗೂ ತರಬೇತುದಾರರು ಹಾಜದ್ದರು.

## ಫಾಸ್ಟ್ ನ್ಯೂಸ್

### 28ಕ್ಕೆ ನಗರದ ವಿಶ್ವ ಕಾರ್ಮಿಕರ ದಿನಾಚರಣೆ

» ಚಿತ್ರದುರ್ಗ

ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾನ ಕಾರ್ಮಿಕರ ಫೇಡರೇಷನ್, ಚಿತ್ರದುರ್ಗ ಜಿಲ್ಲಾ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಮಿತಿವತಿ ಯಿಂದ ಮೇ, 28 ರ ಮಂಗಳವಾರ ಬೆಳಿಗ್ಗೆ 11ಕ್ಕೆ ನಗರದ ಪತ್ರಿಕಾ ಭವನದಲ್ಲಿ 139ನೇ ಮೇ ವಿಶ್ವ ಕಾರ್ಮಿಕರ ದಿನಾಚರಣೆ ಮತ್ತು ಹಿರಿಯ ಕಟ್ಟಡ ಕಾರ್ಮೀಕರಿಗೆ ಸನ್ಮಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಟ್ಟಡ ಕಾರ್ಮಿಕರ ಜಿಲ್ಲಾ ಸಮಿತಿ ಅಧ್ಯಕ್ಷರಾದ ಮಂಜುನಾಥ್ ವಹಿಸಲಿದ್ದಾರೆ. ಕಟ್ಟಡ ಕಾರ್ಮಿಕರ ಜಿಲ್ಲಾ ಸಮಿತಿಯ ರಾಜ್ಯ ಉಪಾಧ್ಯಕ್ಷರು ಸಿಐಟಿಯುನ ಜಿಲ್ಲಾ ಸಮಿತಿಯ ಪ್ರಧಾನ ಕಾರ್ಯದರ್ಶಿಗಳಾದ ಸಿ.ಕೆ.ಗೌಸ್‌ಪೀರ್ ಉದ್ಘಾಟನೆ ಮಾಡಲಿದ್ದಾರೆ. ನಿವೃತ್ತ ಪ್ರಾಂಶುಪಾಲರಾದ ಯಾದವ ರೆಡ್ಡಿ, ಕಟ್ಟಡ ಕಾರ್ಮಿಕ ಜಿಲ್ಲಾ ಸಮಿತಿಯ ಗೌರವಾಧ್ಯಕ್ಷರಾದ ಅಬ್ದುಲ್ಲಾ, ಕಾರ್ಮೀಕ ಮಹಿಳಾ ಸಂಚಾಲಕರಾದ ಶ್ರೀಮತಿ ಸಣ್ಣಮ್ಮ, ಶ್ರೀಮತಿ ಚಂದ್ರಮ್ಮ, ಶ್ರೀಮತಿ ದ್ರಾಕ್ಷಾಯಣಮ್ಮ, ತಾಲ್ಲೂಕು ಕಾರ್ಯದರ್ಶಿಗಳಾದ ಇಸ್ಮಾಯಿಲ್ ಸಾಬ್ ಟಿ.ಷಫಿವುಲ್ಲಾ ಭಾಗವಹಿಸಲಿದ್ದಾರೆ. ಇದಕ್ಕೂ ಮುನ್ನಾ ನಗರದ 10 ಗಂಟೆಗೆ ನಗರದ ಡಿಸಿ ವೃತ್ತದಲ್ಲಿನ ಭಗತ್‌ಸಿಂಗ್ ಉದ್ಯಾನವದಿಂದ ಪತ್ರಿಕಾ ಭವನದವರೆಗೂ ಮರೆವಣಿಗೆಯನ್ನು ನಡೆಸಿ ಕಟ್ಟಡ ಕಾರ್ಮಿಕರ ಕಾನೂನು ಹಾಗೂ ಸೆಸ್ ಕಾನೂನು 1996 ಪುನರ್ ಸ್ಥಾಪಿಸಲು ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಗಳ ರಕ್ಷಿಸಲು ಕಲ್ಯಾಣ ಮಂಡಳಿಯ ಎಲ್ಲಾ ಘೋಷಿತ ಸೌಲಭ್ಯಗ ಜಾರಿಗಾಗಿ ಕೋವಿಡ್ ಹೆಸರಲ್ಲಿ ನಡೆದಿರುವ ಎಲ್ಲಾ ಖರೀದಿಗಳ ತನಿಖೆಗೆ ಆಗ್ರಹಿಸಿ ಮನೆ ಕಟ್ಟಲು 5 ಲಕ್ಷ ರೂ. ಕೂಡಲು ಆಗ್ರಹಿಸಿ 2022-23ನೇ ಸಾಲಿನ ವಿದ್ಯಾರ್ಥಿ ವೇತನವನ್ನು ಕೂಡಲು ಆಗ್ರಹಿಸಲಾಗುವುದು.

### ಬೆಸ್ಕಾಂ ಕಾರ್ಯ & ಪಾಲನ ಕಚೇರಿ ಸ್ಥಳಾಂತರ

» ಚಿತ್ರದುರ್ಗ

ನಗರದ ಐಶ್ವರ್ಯ ಪೋರ್ಟ್ ಮುಂದಿನ ಹಳೇ ಬೆವಿಕಂ ಕಾಲೋನಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಬೆಸ್ಕಾಂ ಕಾರ್ಯ ಮತ್ತು ಪಾಲನಾ ಉಪವಿಭಾಗದ ಕಚೇರಿಯನ್ನು, ನಗರದ ಜಿಲ್ಲಾಧಿಕಾರಿಗಳ ಕಚೇರಿ ಪಕ್ಕದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ.ಆದ್ದರಿಂದ ಗ್ರಾಹಕರು ಮತ್ತು ಸಾರ್ವಜನಿಕರು ವಿದ್ಯುತ್ ಬಿಲ್ ಪಾವತಿ ಮಾಡಲು ಹಾಗೂ ಇತರೆ ಗ್ರಾಹಕರ ಸೇವೆಗಳಿಗಾಗಿ ಜಿಲ್ಲಾಧಿಕಾರಿಗಳ ಕಚೇರಿ ಪಕ್ಕದಲ್ಲಿ ನಿರ್ಮಿಸಿರುವ ಹೊಸ ಕಟ್ಟಡಕ್ಕೆ ಬೇಟಿ ನೀಡಬಹುದು ಎಂದು ನಗರದ ಉಪವಿಭಾಗ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಐಟಿಐ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

» ದಾವಣಗೆರೆ

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಜಗಳೂರು ಇಲ್ಲಿ ಐಟಿಐ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. cite karnataka. gov.in ವೆಬ್‌ಸೈಟ್ ಮೂಲಕ ಅರ್ಜಿಯನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಜಗಳೂರು ಇಲ್ಲಿ ಅಥವಾ ದೂ.ಸಂ: 08196-227110 ಗೆ ಸಂಪರ್ಕಿಸಲು ಪ್ರಾಂಶುಪಾಲರು ತಿಳಿಸಿದ್ದಾರೆ.

### ಮೈದುಂಬಿ ಹರಿಯುತ್ತಿರುವ ವೇದಾವತಿ ನದಿ

» ಮೊದಲ ಪುಟದಿಂದ

ವೇದಾವತಿ ನದಿ ನೀರು ಕೆಲ್ಲೋಡು ಬ್ಯಾರೇಜ್ ಮೂಲಕ ಒಂದು ವಾರಗಳಿಂದ ನಿರಂತರವಾಗಿ ಜಲಾಶಯ ಸೇರುತ್ತಿದ್ದು, ಜಲಾಶಯದ ನೀರಿನ ಮಟ್ಟ 114 ಅಡಿಗೆ ತಲುಪಿದೆ. ಕೃತ್ತಿಕಾ ಮಳೆಯಂತೆಯೇ ಮಂದೆ ಬರಲಿರುವ ಮಳೆಗಳು ಬಂದರೆ, ಈ ಬಾರಿಯೂ ಕೂಡ ಮತ್ತೊಮ್ಮೆ ಜಲಾಶಯ ಭರ್ತಿಯಾಗುವ ಸಾಧ್ಯತೆ ಹೆಚ್ಚಾಗಿದೆ ಎಂಬುದು ಗ್ರಾಮೀಣ ಜನರ ಮಾತಾಗಿದೆ. ವಾರದಿಂದ ಸುರಿಯುತ್ತಿರುವ ಮಳೆಗೆ ರೈತರ ಮುಖದಲ್ಲಿ ಮಂದಹಾಸ ಮೂಡಿದ್ದು, ಕೃಷಿ ಕಾರ್ಯಗಳು ಚುರುಕುಗೊಂಡಿವೆ.

### ಬಣಕಲ್ ಬಳಿ ಭೀಕರ ಸರಣಿ ಅಪಘಾತ: ಮೃತ ಕುಟುಂಬಗಳಿಗೆ ತಲಾ 2 ಲಕ್ಷ ಘೋಷಣೆ: ಸಚಿವ

» ಮೊದಲ ಪುಟದಿಂದ

ಮೃತರು ಧರ್ಮಸ್ಥಳ ಮಂಜುನಾಥೇಶ್ವರ ದರ್ಶನ ಪಡೆದು ವಾಪಸ್ ಬರುವಾಗ ಈ ಘಟನೆ ಸಂಭವಿಸಿದೆ.ಈ ಘಟನೆಗೆ ಸಂಬಂಧಿಸಿದಂತೆ ಚಿತ್ರದುರ್ಗ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಚಿಕ್ಕಮಗಳೂರಿನ ಜಿಲ್ಲಾಡಳಿತದೊಂದಿಗೆ ಸಮನ್ವಯ ಸಾಧಿಸಿ, ವೈದ್ಯಕೀಯ ತಪಾಸಣೆಗಳ ನಂತರ ಮೃತರ ಕಳೇಬರಹವನ್ನು ಮೃತ ಕುಟುಂಬದವರಿಗೆ ತಲುಪಿಸಿ ಅಂತ್ಯಕ್ರಿಯೆ ಮಾಡಿಸುವಲ್ಲಿ ಸಹಕರಿಸಿದ್ದಾರೆ.

---

**ಅಧಿಕಾರ ಇದ್ದ ಅಭ್ಯರ್ಥಿ ಪರವಾಗಿ ಮತವನ್ನು ಹಾಕಿ ವಿರೋಧ ಪಕ್ಷದವರಿಗೆ ಮತವನ್ನು ಹಾಕಿ ವೇಸ್ಟ ಮಾಡಿಕೊಳ್ಳಬೇಡಿ: ಮಾಜಿ ಸಚಿವ ಆಂಜನೇಯ ಕರೆ**

# ಪರಿಷತ್‌ನ 6 ಕ್ಷೇತ್ರದಲ್ಲೂ ಕಾಂಗ್ರೆಸ್ ಗೆಲ್ಲಬೇಕು

» ಚಿತ್ರದುರ್ಗ



ರಾಜ್ಯದಲ್ಲಿ ಆಡಳಿತವನ್ನು ನಡೆಸುತ್ತಿರುವ ಕಾಂಗ್ರೆಸ್ವ ಸರ್ಕಾರ ಶಿಕ್ಷಣ ಕ್ಷೇತ್ರದಲ್ಲಿ ಇರುವ ಹಲವಾರು ಸಮಸ್ಯೆಗಳಿಗೆ ಪರಿಹಾರವನ್ನು ಕಂಡುಕೊಳ್ಳುವ ಕಾರ್ಯವನ್ನು ಮಾಡುತ್ತಿದೆ, ಅನುದಾನಿತ ಮತ್ತು ಅನುದಾನ ರಹಿತ ಶಿಕ್ಷಣ ಸಂಸ್ಥೆಗಳನ್ನು ಉಳಿಸುವ ಕಾರ್ಯವನ್ನು ಕಾಂಗ್ರೆಸ್ ಸರ್ಕಾರ ಮಾಡುತ್ತದೆ ಎಂದು ವಿಧಾನ ಪರಿಷತ್ ಸದಸ್ಯರಾದ ಪುಟ್ಟಣ್ಣಯ್ಯ ಭರವಸೆಯನ್ನು ನೀಡಿದ್ದಾರೆ.

ಚಿತ್ರದುರ್ಗ ನಗರದ ದುರ್ಗದಸಿರಿ ಹೋಟೇಲ್‌ನಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಇದುವರೆವಿಗೂ ಶಿಕ್ಷಕರ ಹಲವಾರು ಸಮಸ್ಯೆಗಳನ್ನು ಈಡೇರಿಸಿ ಕೊಳ್ಳಲು ಹೋರಾಟವನ್ನು ಮಾಡಲಾಗಿದೆ, ಶಿಕ್ಷಕರ, ವಿದ್ಯಾರ್ಥಿಗಳ ಹಾಗೂ ಸಂಸ್ಥೆಗಳ ಪರವಾಗಿ ಹೋರಾಟವನ್ನು ಮಾಡುವುದರ ಮೂಲಕ ಸರ್ಕಾರದಿಂದ ಸೌಲಭ್ಯಗಳನ್ನು ಕೂಡಿಸಲಾಗಿದೆ. ಇದರಲ್ಲಿ ಯಾವುದೇ ರಾಜಕಾರಣ ಮಾಡಿಲ್ಲ, ಸರ್ಕಾರ ತನ್ನ ನೌಕರರಿಗೆ 7ನೇ ವೇತನ ಆಯೋಗದ ಶಿಫಾರಸ್ಸಿನಂತೆ ವೇತನ ನೀಡಲು ತಯಾರಿದೆ ಆದರೆ ಚುನಾವಣಾ ನೀತಿ ಸಂಹಿತೆ ಅಡ್ಡಿ ಬಂದಿದ್ದರಿಂದ ಮಾಡಿಲ್ಲ ನೀತಿ ಸಂಹಿತೆ ಮುಗಿದ ನಂತರ ಸರ್ಕಾರ ಜಾರಿ ಮಾಡಲಿದೆ ಇದರಲ್ಲಿ ಯಾವುದೆ ಆತಂಕ ಬೇಡ ಎಂದರು.

2006ರ ನಂತರ ಕೆಲಸಕ್ಕೆ ಸೇರಿದವರಿಗೆ ಸರ್ಕಾರದಿಂದ ಯಾವುದೇ ರೀತಿಯ ಸೌಲಭ್ಯ ನಿವೃತ್ತಿಯ ನಂತರ ಸಿಗುವುದಿಲ್ಲ ಇದರ ಬಗ್ಗೆಯೂ ಸಹಾ ಗಂಭೀರವಾದ ಚಿಂತನೆಯನ್ನು ನಡೆಸಿದೆ. ಅನುದಾನಿತ ಮತ್ತು ಅನುದಾನ ರಹಿತ ಸಂಸ್ಥೆಗಳಲ್ಲಿ ಕೆಲಸ ಮಾಡುವವರ ಪರವಾಗಿ ವಿಶೇಷವಾದ ಕಾಳಜಿಯನ್ನು ಸರ್ಕಾರ ತೋರಿದ್ದು ಅವರಿಗೂ ಸಹಾ ಏನಾದರೀ ಸಹಾಯವನ್ನು ಮಾಡಲು ಸರ್ಕಾರ ಪಣ ತೊಟ್ಟಿದೆ. ಶಿಕ್ಷಕರು ತಮ್ಮ ಬೇಡಿಕೆಗಳನ್ನು ಈಡೇರಿಸಿಕೊಳ್ಳುವ ಸಲುವಾಗಿ ಬೆಂಗಳೂರಿನಲ್ಲಿ 140 ದಿನ ಹೂರಾಟವನ್ನು ಮಾಡಿದರು ಅಂದಿನ ಬಿಜೆಪಿ ಸರ್ಕಾರ ಇದರ ಬಗ್ಗೆ ಯಾವ ರೀತಿಯ ಕಾಳಜಿಯನ್ನು ತೋರಿಸಲಿಲ್ಲ ಅಂದು ನಾನು ಸಹಾ ಬಿಜೆಪಿಯಿಂದ ವಿಧಾನ ಪರಿಷತ್‌ನಲ್ಲಿ ಸದಸ್ಯನಾಗಿದ್ದೆ ಸರ್ಕಾರದ ಮುಂದೆ ಶಿಕ್ಷಕರ ಮತ್ತು ಸರ್ಕಾರ ಮಧ್ಯೆ ಸಂದಾನದ ಸಭೆಯನ್ನು ನಡೆಸುವಂತೆ ಮನವಿ ಮಾಡಿದರು ಸರ್ಕಾರ ಇದರ ಬಗ್ಗೆ ಕಿವಿಕೂಡಲಿಲ್ಲ ಇದರಿಂದ ಬೇಸತ್ತ ನಾನು ವಿಧಾನ ಪರಿಷತ್‌ಗೆ ರಾಜೀನಾಮೆಯನ್ನು ನೀಡಿ ಹೊರಬಂದೆ, ತದ ನಂತರ ಡಿ,ಕೆ.ಶಿವಕುಮಾರ್ ಶಿಕ್ಷಕರ ಪ್ರತಿಭಟನಾ ಸ್ಥಳಕ್ಕೆ ಬಂದು ನಿಮ್ಮ ಪರವಾಗಿ ನಾವು ಇದ್ದೇವೇ ಮುಂದಿನ ದಿನದಲ್ಲಿ ನಮ್ಮ ಸರ್ಕಾರ ಬಂದರೆ ನಿಮ್ಮ ಬೇಡಿಕೆಯನ್ನು ಈಡೇರಿಸುವುದಾಗಿ ಭರವಸೆಯನ್ನು ನೀಡಿದ್ದರು ಅದರಂತೆ ಈಗ ಕಾಂಗ್ರೆಸ್ ಪಕ್ಷ ಅಧಿಕಾರಕೆಕ ಬಂದಿದ್ದು ಶಿಕ್ಷಕರ ಬೇಡಿಕೆ ಈಡೇರಿಕೆಯ ಸಲುವಾಗಿ ಅಧಿಕಾರಿಗಳ ಸಮಿತಿಯನ್ನು ರಚನೆ ಮಾಡಿದ್ದಾರೆ, ಚುನಾವಣೆ ಮುಗಿದ ಮೇಲೆ ಮುಖ್ಯಮಂತ್ರಿಗಳನ್ನು ಹಾಗೂ ಉಪ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ನಮ್ಮ ಬೇಡಿಕೆ ಈಡೇರಿಸುವ ಕಾರ್ಯವನ್ನು ಚುರುಕು ಮಾಡುವಂತೆ ಒತ್ತಡವನ್ನು ಹಾಕುವ ಮನವಿ ಮಾಡಲಾಗುವುದೆಂದು ತಿಳಿಸಿದರು. ಗೋಷ್ಟಿಯಲ್ಲಿ ಭಾಗವಹಿಸಿದ್ದ ಮಾಜಿ ಸಚಿವರಾದ ಹೆಚ್.ಆಂಜನೇಯ ಮಾತನಾಡಿ, ಈ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಗಂಭೀರವಾಗಿ ಪರಿಣಮಿಸಿದೆ ಆರು ಕ್ಷೇತ್ರಗಳಲ್ಲಿಯೂ ಸಹಾ ಕಾಂಗ್ರೆಸ್ ಅಭ್ಯರ್ಥಿಗಳು ಗೆಲ್ಲಬೇಕೆಂದು ತೀರ್ಮಾನ ಮಾಡಿದೆ ಪರಿಷತ್ ನಲ್ಲಿ ನಮ್ಮ ಪಕ್ಷದ ಸಂಖ್ಯಾ ಬಲ ಕಡಿಮೆ ಇದನ್ನು ಹೆಚ್ಚಳ ಮಾಡಲು ಆರು ಕ್ಷೇತ್ರಗಳಲ್ಲಿ ನಮ್ಮ ಅಭ್ಯರ್ಥಿಗಳು ಗೆಲುವ ಅನಿವಾರ್ಯ ಇದೆ ಎಂಅದ ಅವರು ಇನ್ನು 4 ವರ್ಷ ನಮ್ಮ ಸರ್ಕಾರ ಇರುತ್ತದೆ ಅಧಿಕಾರ ಇದ್ದ ಅಭ್ಯರ್ಥಿ ಪರವಾಗಿ ಮತವನ್ನು ಹಾಕಿ ವಿರೋಧ ಪಕ್ಷದವರಿಗೆ ಮತವನ್ನು ಹಾಕಿ ವೇಸ್ಟ ಮಾಡಿಕೊಳ್ಳಬೇಡಿ, ನಮ್ಮ ಪಕ್ಷದವರನ್ನು ಗೆಲ್ಲಿಸಿದರೆ ಮುಂದಿನ ದಿನದಲ್ಲಿ ಶಿಕ್ಷಕರಿಗೆ ಸಹಾಯವಾಗುವ ಕೆಲಸಗಳನ್ನು ಮಾಡಲು ಅನುಕೂಲವಾಗುತ್ತದೆ ಇದ್ದಲ್ಲದೆ ನಿಮ್ಮ ಸಮಸ್ಯೆಗಳನ್ನು ಬಗೆಹರಿಸಲು ಸಹಾಯವಾಗುತ್ತದೆ. ಸರ್ಕಾರ ಶಿಕ್ಷಕರ ಸರ್ವಾನುಮತದ ಅಭೀವೃದ್ದಿಗೆ ಕಂಕಣ ಬದ್ದವಾಗಿದೆ ಎಂದರು.ಗೋಷ್ಟಿಯಲ್ಲಿ ಡಿಸಿಸಿ ಅಧ್ಯಕ್ಷರಾದ ತಾಜ್‌ಪೀರ್ ಕಾರ್ಯಾಧ್ಯಕ್ಷರಾದ ಹಾಲಸ್ವಾಮಿ, ಪ್ರಧಾನ ಕಾರ್ಯದರ್ಶಿಗಳಾದ ಸಂಪತ್ ಕುಮಾರ್, ಮೈಲಾರಪ್ಪ, ಕೆಡಿಪಿ ಸಭೆಯ ಸದಸ್ಯರಾದ ಕೆ.ಸಿ.ನಾಗರಾಜ್, ಮುದಸಿರ್ ನವಾಜ್, ಜಿ.ಪಂ.ಮಾಜಿ ಸದಸ್ಯರಾದ ನರಸಿಂಹರಾಜು,ಲಕ್ಷ್ಮೀಕಾಂತ,ಅನುದಾನಿತ ಶಿಕ್ಷಕರ ಸಂಘದ ಅಧ್ಯಕ್ಷ ಹನುಮಂತಪ್ಪ, ವೆಂಕಟೇಶ್ ಭಾಗವಹಿಸಿದ್ದರು.

---

**ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ನಾಗಸಮುದ್ರ ಸಲಹೆ**

## ಸುರಕ್ಷಿತ ನಾಳೆಗಾಗಿ ಡೆಂಗಿ ತಡೆ ನಮ್ಮೆಲ್ಲರ ಜವಾಬ್ದಾರಿ

» ಚಿತ್ರದುರ್ಗ



ಸುರಕ್ಷಿತ ನಾಳೆಗಳಿಗಾಗಿ ಡೆಂಗಿ ತಡೆಗಟ್ಟುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ. ಚಂದ್ರಕಾಂತ್ ನಾಗಸಮುದ್ರ ಅವರು ಸಾರ್ವಜನಿಕರಿಗೆ ಸಲಹೆ ನೀಡಿದ್ದಾರೆ.

ಮಳೆಗಾಲದ ದಿನಗಳಲ್ಲಿ ಡೆಂಗಿ ಹರಡುವ ಸಾಧ್ಯತೆ ಹೆಚ್ಚಿರುತ್ತದೆ. ಮಳೆ ಬಂದು ಮನೆ ಸುತ್ತಮುತ್ತ ನೀರು ಶೇಖರಣೆಯಾದಲ್ಲಿ ಸೊಳ್ಳೆಗಳ ಸಂತಾನೋತ್ಪತ್ತಿಯಾಗಿ ಡೆಂಗಿ ಹರಡಲು ಸಹಾಯಕವಾಗುತ್ತದೆ ಹಾಗೂ ವಾತಾವರಣದ ಉಷ್ಣಾಂಶವು ಕೂಡ ವೈರಾಣುಗಳ ಬೆಳವಣಿಗೆಗೆ ಹಾಗೂ ಡೆಂಗ್ಯೂ ಸೊಳ್ಳೆಗಳ ಸಂತಾನೋತ್ಪತ್ತಿಗೆ ಪೂರಕವಾಗಿರುವುದರಿಂದ ಮಳೆಗಾಲದಲ್ಲಿ ಡೆಂಗಿ ಪ್ರಕರಣಗಳು ಹೆಚ್ಚಾಗಿ ಕಂಡುಬರುತ್ತವೆ.

ಆದಕಾರಣ ಸಾರ್ವಜನಿಕರು ತಮ್ಮ ಪರಿಸರದಲ್ಲಿ ಎಲ್ಲಿಯೂ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಮನೆಯ ಒಳಗಡೆಯೂ ನೀರನ್ನು ಸಂಗ್ರಹಿಸುವುದಾದರೆ ಅದರ ಮುಚ್ಚಳವನ್ನು ಮುಚ್ಚಿಟ್ಟರಬೇಕು. ಸೊಳ್ಳೆಗಳು ಕಚ್ಚದಂತೆ ಸಂಪೂರ್ಣವಾಗಿ ಮೈಮುಚ್ಚುವಂತಹ ಬಟ್ಟೆಯನ್ನು ಧರಿಸಬೇಕು ಇದರಿಂದ ಡೆಂಗಿ ಹರಡುವ ಸಾಧ್ಯತೆ ಕಡಿಮೆಯಾಗುತ್ತದೆ. ಸೊಳ್ಳೆಗಳು ಮನೆ ಒಳಗೆ ಬರದಂತೆ ಚಂಡು ಹೂವು, ಬೇವಿನ ಎಲೆ ಹಾಗೂ ಬೆಳ್ಳುಳ್ಳಿ ಸಿಪ್ಪೆಯ ಧೂಪನ (ಹೊಗೆಯನ್ನು) ಹಾಕುವುದರಿಂದ ಸೊಳ್ಳೆಗಳು ಮನೆ ಒಳಗೆ ಬರುವುದನ್ನು ತಪ್ಪಿಸಬಹುದು. ಈ ಸರಳ ಕ್ರಮಗಳಿಂದ ನಾವು ಡೆಂಗಿ ಬರದಂತೆ ತಡೆಯಬಹುದು.

ತೀವ್ರ ಜ್ವರ ತಲೆನೋವು ಕೈಕಾಲು ನೋವು ಲಕ್ಷಣಗಳು ಬಂದರೆ ತಕ್ಷಣವೇ ವೈದ್ಯರನ್ನು ಸಂಪರ್ಕಿಸಿ. ಡೆಂಗಿ ಲಕ್ಷಣಗಳು ಆಯುರ್ವೇದದಲ್ಲಿ ಹೇಳಿರುವ ರಕ್ತ ದೋಷದಿಂದ ಆಗುವಂತಹ ರಕ್ತ ಪಿತ್ತ ಎಂಬ ಖಾಯಿಲೆಯ ಲಕ್ಷಣಗಳನ್ನು ಹೋಲುತ್ತವೆ. ವೈದ್ಯರು ನೀಡುವ ಚಿಕಿತ್ಸೆಯೊಂದಿಗೆ ಪಪ್ಪಾಯಿ ಎಲೆಯ ರಸ, ಈರುಳ್ಳಿರಸವನ್ನು ಮನೆಮದ್ದಾಗಿ ಬಳಸಿ ಎಂದರು.

ಡೆಂಗಿ ಕಾಯಿಲೆಯು ವೈರಾಣುನಿಂದ ಬರುವ ಕಾರಣ ಅಮೃತಬಳ್ಳಿ ತುಳಸಿ ಇವುಗಳ ಎಲೆಯನ್ನು ಸೇವಿಸುವುದು ಜ್ವರ, ಮೈಕೈನೋವು ನಿಯಂತ್ರಿಸಲು ಸಹಾಯಕ. ಸತ್ವಯುತವಾದ ಪೋಷಕಾಂಶಯುಕ್ತ ಆಹಾರವನ್ನು ಸೇವಿಸಿ, ರೋಗನಿರೋಧಕ ಶಕ್ತಿಯನ್ನು ಚೆನ್ನಾಗಿ ಇಟ್ಟುಕೊಂಡಲ್ಲಿ ಯಾವುದೇ ಕಾಯಿಲೆ ಬರುವ ಸಾಧ್ಯತೆಗಳು ಕಡಿಮೆ ಆದಕಾರಣ ಉತ್ತಮವಾದ ಆಹಾರ, ಜೀವನ ಶೈಲಿಯನ್ನು ಪಾಲಿಸಿ ಆರೋಗ್ಯ ಕಾಪಾಡಿ ಕೊಳ್ಳಿ ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ. ಚಂದ್ರಕಾಂತ್ ನಾಗಸಮುದ್ರ ಅವರು ಸಾರ್ವಜನಿಕರಿಗೆ ಕರೆ ನೀಡಿದ್ದಾರೆ.

---

## ಪ್ರವಾಸಕ್ಕೆ ತೆರಳಿದ್ದ ನಿರ್ಮಲಮ್ಮ ಶವವಾಗಿ ಹೊಳಲ್ಕೆರೆಗೆ

» ಎಸ್.ವೇದ ಮೂರ್ತಿ ಹೊಳಲ್ಕೆರೆ



ಹೊಳಲ್ಕೆರೆ:ಚೀಟಿ ಹಣದಿಂದ ಸಂತೋಷವಾಗಿ ಒಂದು ವಾರ ಕುಟುಂಬಸ್ಥರ ಜತೆ ತಮಿಳುನಾಡು ಪ್ರವಾಸ ಕೈಗೊಂಡಿದ್ದ, ಹೊಳಲ್ಕೆರೆ ನಿರ್ಮಲಮ್ಮ ಶವವಾಗಿ ಊರಿಗೆ ಬರುತ್ತಿರುವುದು ದುರಂತವೆ ಸರಿ. ಕುಟುಂಬಸ್ಥರ ಜತೆ ಹಾಡಿ ನಲಿದಾಡಿದ ಕ್ಷಣಗಳು ಕಣ್ಣಿಗೆ ಕಟ್ಟುವ ಮೊದಲೆ ಇಹಲೋಕ ತ್ಯಾಜಿಸಿ ಹಟ್ಟಿಯಲೊಂದು ಕಹಿ ಘಟನೆ ಮರೆಯದ ನೆನಪಾಗಿದೆ.

ರೈಲಿನೊಳಗೆ ಶೌಚಾಲಯಕ್ಕೆ ಹೊಗಿದ್ದಾಗ ಕಾಲು ಜಾರಿ ರೈಲ್ವೆ ಬೋಗಿಯಿಂದ ಆಕಸ್ಮಿಕವಾಗಿ ಕೆಳಗೆ ಬಿದ್ದು ಹೊಳಲ್ಕೆರೆಯ ಮಹಿಳೆ ಸಾವನ್ನಪ್ಪಿದ ಘಟನೆ ತಮಿಳುನಾಡಿನ ಮಧುರೈ ಮಾರ್ಗದ ಧರ್ಮಪುರಿ ಸಮಿಪದ ಟೋನೂರು ಹತ್ತಿರ ಶುಕ್ರವಾರ ತಡರಾತ್ರಿ ಸಂಭವಿಸಿದೆ.

ಮೃತ ದುರ್ದೈವಿ ಮಹಿಳೆ ಹೊಳಲ್ಕೆರೆ ಪಟ್ಟಣದ ಒಂದನೇ ವಾರ್ಡ್ ಮುಷ್ಠಿಗರ ಹಟ್ಟಿಯ ರೈತ ಮುಖಂಡ ಕುಮಾರ್ ಅಚಾರ್ ಧರ್ಮಪತ್ನಿ ನಿರ್ಮಲಮ್ಮ 55 ವರ್ಷ ಎನ್ನಲಾಗಿದೆ.

ಮೃತ ನಿರ್ಮಲಮ್ಮ ಕುಟುಂಬಸ್ಥರಾದ ಗಂಡ, ಮಕ್ಕಳು, ಅಳಿಯಂದಿರು, ತಮ್ಮ, ಮೈದುನನ ಮಕ್ಕಳು ಸೇರಿದ ಹಟ್ಟಿಯ ಅಕ್ಕಪಕ್ಕದ ಮನೆಯವರೆಲ್ಲ ಪ್ರವಾಸದ ಚೀಟಿಯಲ್ಲಿ ಸಂಗ್ರಹಿಸಿದ ಹಣದಿಂದ 50 ಜನರ ತಂಡ ತಮಿಳುನಾಡು ಪ್ರೇಕ್ಷಣೀಯ ಸ್ಥಳಗಳನ್ನ ವೀಕ್ಷಿಸಲು ಪ್ರವಾಸ ಕೈಗೊಳ್ಳಲಾಗಿತ್ತು. ಕಳೆದ ವಾರ ಚಿಕ್ಕಜಾಜೂರು ರೈಲ್ವೆ ನಿಲ್ದಾಣದಲ್ಲಿ ಪ್ರವಾಸಕ್ಕೆ ತೆರಳಿದ್ದರು. ಪ್ರವಾಸ ಮುಗಿಸಿ ಊರಿಗೆ ವಾಪಾಸಾಗಲು ಕನ್ನಕುಮಾರಿ ಯಿಂದ ಮದುರೈ ಮಾರ್ಗದಲ್ಲಿ ಬೆಂಗಳೂರಿಗೆ ಸ್ಲೀಪಿಂಗ್ ಕೋಚ್‌ನಲ್ಲಿ ಪ್ರಯಾಣಿಸುತ್ತಿರುವಾಗ ತಡರಾತ್ರಿ ಮೂತ್ರ ವಿಸರ್ಜನೆಗೆ ಶೌಚಾಲಯಕ್ಕೆ ಹೊದಾಗ ಅಕಸ್ಮಿಕವಾಗಿ ಕಾಲು ಜಾರಿ ಬೋಗಿಯಿಂದ ಕೆಳಗೆ ಬಿದ್ದ ಘಟನೆ ನಡೆದಿದೆ. ಜತೆಯಲ್ಲಿದ್ದ ಗಂಡ ಕುಮಾರ್‌ಆಚಾರ ಮುಂದಿನ ರೈಲ್ವೆ ನಿಲ್ದಾಣದಲ್ಲಿ ನಿದ್ದೆಯಿಂದೆ ಎಚ್ಚರಗೊಂಡಾಗ ಹೆಂಡತಿ ನಿರ್ಮಲಮ್ಮ ಪಕ್ಕದಲ್ಲಿ ಕಾಣಿಸಲಿಲ್ಲ. ಗಾಬರಿಗೊಂಡು ಬೋಗಿ ಪರಿಶೀಲಿಸಿದಾಗ ಅವರ ಚಪ್ಪಲಿ ಮತ್ತು ಪೂನ್ ಬೋಗಿಯ ಶೌಚಾಲಯದ ಹತ್ತಿರ ಬಿದ್ದಿರುವುದು ನೋಡಿ ಸ್ಥಳೀಯರಿಗೆ ಮಾಹಿತಿ ನೀಡಿದ್ದಾರೆ. ತಕ್ಷಣವೇ ಅದೆ ನಿಲ್ದಾಣದಲ್ಲಿ ಇಳಿದ ಕುಮಾರ್ ಅಚಾರ್ ಮತ್ತು ಅಳಿಯಂದಿರುವ ಹತ್ತಿರದ ಧರ್ಮಪುರಿ ಪೊಲೀಸ್ ಠಾಣೆಗೆ ದೂರು ನೀಡಿದಾಗ ಪೊಲೀಸ್ ಜತೆ ರೈಲ್ವೆ ಹಳಿ ಪರಿಶಿಲಿಸಿದಾಗ ಟೋನೂರು ಎಂಬಲ್ಲಿ ನಿರ್ಮಲಮ್ಮ ಶವವಾಗಿ ಪತ್ತೆಯಾಗಿದ್ದಾರೆ.

ಮೃತ ಮಹಿಳೆಯ ಗಂಡ ಕುಮಾರ್‌ಅಚಾರ್, ಮಗಳುತಾರಕೇಶ್ವರಿ,ನೇತ್ರಾವತಿ,ಅಳಿಯಂದಿರಾದ ಉಮೇಶ್ ಅಚಾರ್, ಮದು ಆರ್.ಅಚಾರ್, ತಮ್ಮ ಮೌನೇಶ್ ಅಚಾರ್, ಮೈದುನ ವೀರುಪಾಕ್ಷಚಾರ್ ಮಕ್ಕಳಾದ ವಾಣಿ, ಗೀತಾ, ದರ್ಶನ್, ತಂಗಿಯ ಮಗ ಹೆಂಮತ ಅಚಾರ್ ಎಲ್ಲಾರು ಕ್ಷೇಮಾ ವಾಪಾಸು ಬಂದಿದ್ದಾರೆ. ನಮ್ಮ ಅತ್ತಿಗೆ ಬರಲ್ಲಿ ಎಂದು ಮೈದುನ ವಿರುಪಾಕ್ಷಚಾರ್ ಆಕ್ರಂದನ ಸೇರಿ ಪಟ್ಟಣದ ಒಂದನೇ ವಾರ್ಡ್ ನಾಗರಿಕರು ದುಃಖ ವ್ಯಕ್ತಪಡಿಸಿದ್ದಾರೆ.

ಈ ಸಂಬಂಧ ಧರ್ಮಪುರಿ ರೈಲ್ವೆ ಪೊಲೀಸ್ ಪ್ರಕರಣ ದಾಖಲಿಸಿದೆ. ಮೃತರ ಶವನ್ನು ಹೊಳಲ್ಕೆರೆ ತರುಲು ಹೆಚ್ಚಿನ ಸಹಕಾರ ನೀಡಬೇಕೆಂದು ತಹಸೀಲ್ದಾರ್ ಬೀಬಿ ಪಾತೀಮ ಹಾಗೂ ಜಿಲ್ಲಾಧಿಕಾರಿಗಳಿಗೆ ಪುರಸಭೆ ಸದಸ್ಯೆ ಹೆಚ್. ಆರ್.ನಾಗರತ್ನಮ್ಮ ಮಾಹಿತಿ ನೀಡಿದ್ದಾರೆ. ಇದಕ್ಕೆ ಪೂರಕವಾಗಿ ಕ್ರಮ ಕೈಗೊಳ್ಳುವ ಭರವಸೆಯನ್ನು ತಹಸೀಲ್ದಾರ್ ನೀಡುರುತ್ತಾರೆ.

---

## ಜಿ.ಎಸ್. ಮಂಜುನಾಥ್‌ರನ್ನು ಎಂಎಲ್‌ಸಿ ಸ್ಥಾನಕ್ಕೆ ಪರಿಗಣಿಸಿ



» ಚಿತ್ರದುರ್ಗ

ಕಾಂಗ್ರೆಸ್ ಪಕ್ಷ ವಿಧಾನ ಪರಿಷತ್‌ನಲ್ಲಿ ಎಡಗೈ ಸಮುದಾಯಕ್ಕೆ ಸ್ಥಾನ ನೀಡುವುದಾದರೆ ಚಿತ್ರದುರ್ಗದ ಜಿ.ಎಸ್. ಮಂಜುನಾಥ್‌ರವರನ್ನು ಪರಿಗಣಿಸುವಂತೆ ಕಾಂಗ್ರೆಸ್ ಮುಖಂಡರನ್ನು ಚಿತ್ರದುರ್ಗ ಎಸ್.ಸಿ. ಕಾಂಗ್ರೆಸ್ ಘಟಕದ ಅಧ್ಯಕ್ಷರಾದ ಎಸ್. ಜಯ್ಯಣ್ಣ ಒತ್ತಾಯಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್‌ನಲ್ಲಿ ಹಲವಾರು ವರ್ಷಗಳ ಕಾಲ ಉತ್ತಮವಾದ ಸಂಘಟನೆಯನ್ನು ಮಾಡಿರುವ ಜಿ.ಎಸ್. ಮಂಜುನಾಥ್‌ರವರನ್ನು ವಿಧಾನ ಪರಿಷತ್ ಸದಸ್ಯರನ್ನಾಗಿ ಮಾಡಿದರೆ ಚಿತ್ರದುರ್ಗ ಜಿಲ್ಲೆ ಮಾತ್ರವಲ್ಲದೆ ರಾಜ್ಯ ಪೂರ್ತಿಯಾಗಿ ಸಹಾಯವಾಗಲಿದೆ ಇದ್ದಲ್ಲದೆ ಕೆಪಿಸಿಸಿ ಅಧ್ಯಕ್ಷರಾದ ಡಿ.ಕೆ.ಶಿವಕುಮಾರ್‌ರವರು ಇವರ ಸಮರ್ಥವನ್ನು ಗುರುತಿಸಿ ರಾಜ್ಯ ಅಸಂಘಟಿತ ಕಾರ್ಮಿಕ ವಿಭಾಗಕ್ಕೆ ರಾಜ್ಯಾಧ್ಯಕ್ಷರನ್ನಾಗಿ ಮಾಡಿದ್ದಾರೆ. ಇದೆ ರೀತಿ ಅವರನ್ನು ವಿಧಾನ ಪರಿಷತ್ ಸದಸ್ಯರನ್ನಾಗಿ ಮಾಡುವುದರ ಮೂಲಕ ರಾಜ್ಯದಲ್ಲಿ ಎಡಗೈ ಸಮುದಾಯವನ್ನು ಗುರುತಿಸಬೇಕಿದೆ ಎಂದು ಮನವಿ ಮಾಡಿದರು.

ಕಾಂಗ್ರೆಸ್ ಹಿಂದುಳಿದ ವರ್ಗಗಳ ಜಿಲ್ಲಾಧ್ಯಕ್ಷರಾದ ಎನ್.ಡಿ.ಕುಮಾರ್ ಮಾತನಾಡಿ, ಜಿ.ಎಸ್.ಮಂಜುನಾಥ್‌ರವರು ಹಲವಾರು ವರ್ಷಗಳ ಕಾಲ ಕಾಂಗ್ರೆಸ್‌ನಲ್ಲಿ ಸಕ್ರಿಯವಾಗಿ ಕಾರ್ಯಕರ್ತರಾಗಿ ಸೇವೆಯನ್ನು ಮಾಡಿದ್ದಾರೆ ಅಲ್ಲದೆ ಪಕ್ಷದಲ್ಲಿ ವಿವಿಧ ರೀತಿಯ ಹುದ್ದೆಗಳನ್ನು ನಿರ್ವಹಿಸಿ ಜಿಲ್ಲೆಯಲ್ಲಿ ಪಕ್ಷದ ಸಂಘಟನೆಗೆ ಒತ್ತು ನೀಡಿದ್ದಾರೆ. ಇವರು ಪದವೀಧರರಾಗಿದ್ದು, ಪರಿಶಿಷ್ಟ ಜಾತಿಯ ಮಾದಿಗ ಸಮುದಾಯದವರಾಗಿದ್ದಾರೆ. ವಿದ್ಯಾರ್ಥಿಯಿಂದಲೂ ಸಹಾ ವಿದ್ಯಾರ್ಥಿ ಕಾಂಗ್ರೆಸ್, ಯುವ ಕಾಂಗ್ರೆಸ್ ಮುಖಾಂತರ ಸುಮಾರು ಕಳೆದ 36 ವರ್ಷಗಳಿಂದಲೂ ಕಾಂಗ್ರೆಸ್‌ನಲ್ಲಿ ಸಕ್ರಿತವಾಗಿ ಇದ್ದಾರೆ.

ಎಲ್ಲಾ ಸಮಾಜದವರನ್ನು ಒಟ್ಟಿಗೆ ಕರೆದುಕೊಂಡು ಹೋಗುವ ಶಕ್ತಿ ಇವರಿಗಿದೆ. ಅತಿ ಹಿಂದುಳಿದ ಸೂಕ್ಷ್ಮ ಅತಿ ಸೂಕ್ಷ್ಮ ಜನಾಂಗದವನ್ನು ಗುರುತಿಸಿ ಅವರನ್ನು ಮೇಲೆತ್ತುವ ಜಾಣ್ಮೆ ಇದೆ ಜಿಲ್ಲೆಯಲ್ಲಿ ಯಾವುದೇ ಸಂಘಟನೆ ಬಂದರೂ ಸಹಾ ಜಿ.ಎಸ್.ಮಂಜುನಾಥ್ ರವರ ಹೆಸರು ಮುಂಚೂಣಿಯಲ್ಲಿರುತ್ತದೆ ಇದ್ದಾರೆ ಇವರಿಂದ ಕನಿಷ್ಠ 20,ಸಾವಿರಕ್ಕೂ ಹೆಚ್ಚು ಕುಟುಂಬಗಳು ನಿಮ್ಮದಿಯ ಜೀವನವನ್ನು ನಡೆಸುತ್ತಿವೆ. ಅವರ ಜೀವನಕ್ಕೆ ಭದ್ರತೆಯನ್ನು ಕಲ್ಪಿಸಿದ್ದಾರೆ. ರಾಜ್ಯದಲ್ಲಿ ಈಗಲೂ ಸಹಾ ಅವರು ಅಭೀಮಾನಿ ಬಳಗವನ್ನು ಹೊಂದಿದ್ದು ಅವರಿಂದ ಸಮಾಜ ಸೇವೆಯ ಕಾರ್ಯವನ್ನು ಮಾಡುತ್ತಿದ್ದಾರೆ ಎಂದರು.

---

**ಪ್ರಮುಖ ಸುದ್ದಿ**

## ಆಗ್ನೇಯ ಶಿಕ್ಷಕರ ಕ್ಷೇತ್ರ ಚುನಾವಣೆ; ಒಪಿಎಸ್ ಸೇರಿದಂತೆ ಎಲ್ಲಾ ಶಿಕ್ಷಕರ ಸಮಸ್ಯೆಗಳನ್ನು ನಿವಾರಿಸಲು ಸರ್ಕಾರ ದಿಟ್ಟಹೆಜ್ಜೆ: ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ



ರಾಜ್ಯದಲ್ಲಿ ಪ್ರಸ್ತುತ ಆಡಳಿತ ನಡೆಸುತ್ತಿರುವ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರ ಶೈಕ್ಷಣಿಕ ಕ್ಷೇತ್ರದ ಅಭಿವೃದ್ಧಿಗೆ ಹಲವಾರು ಯೋಜನೆ ರೂಪಿಸಿದೆ. ಶಾಲಾ ಹಂತದಲ್ಲೇ ಎಲ್ಲಾ ಮಕ್ಕಳಿಗೂ ಗುಣಾತ್ಮಕ ಶಿಕ್ಷಣ ನೀಡುವ ನಿಟ್ಟಿನಲ್ಲಿ ಸರ್ಕಾರ ದಿಟ್ಟ ಹೆಜ್ಜೆ ಇಟ್ಟಿದೆ. ಜೊತೆಯಲ್ಲೇ ಶಿಕ್ಷಕರ ಹಲವಾರು ಸಮಸ್ಯೆಗಳನ್ನು ನಿವಾರಿಸಲು ಕ್ರಮಕೈಗೊಂಡಿದೆ ಎಂದು ಕ್ಷೇತ್ರದ ಶಾಸಕ, ಕರ್ನಾಟಕ ಸಣ್ಣಕೈಗಾರಿಕೆ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಶನಿವಾರ ತಮ್ಮ ನಿವಾಸದಲ್ಲಿ ಆಗ್ನೇಯ ಶಿಕ್ಷಕರ ಕ್ಷೇತ್ರದ ಪಕ್ಷದ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್‌ಪರ ಮತಯಾಚನೆ ಮಾಡಿದರು. ಕ್ಷೇತ್ರದ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳ ಪ್ರಾಂಶುಪಾಲರ ಸಭೆಯಲ್ಲಿ ಮಾತನಾಡಿದರು. ಶಿಕ್ಷಕರ ಹಲವಾರು ಸಮಸ್ಯೆಗಳ ಬಗ್ಗೆ ಸರ್ಕಾರಕ್ಕೆ ಈಗಾಗಲೇ ಸಾಕಷ್ಟು ಮಾಹಿತಿ ಇದೆ. ಶಿಕ್ಷಕರ ಸಮಸ್ಯೆಗಳನ್ನು ನಿವಾರಣೆ ಮಾಡುವುದಲ್ಲಿ ಯಾವುದೇ ಸಂಶಯಬೇಡ. ಒಪಿಎಸ್ ಪದ್ದತಿಯನ್ನು ಜಾರಿಗೆ ತರುವುದಲ್ಲದೆ, 7ನೇ ವೇತನ ಆಯೋಗವನ್ನು ಜಾರಿ ಮಾಡುವ ನಿಟ್ಟಿನಲ್ಲಿ ಸರ್ಕಾರಿ ಕಾಯೋನ್ಮುಖವಾಗಿದೆ. ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್‌ಗೆ ಮೊದಲ ಪ್ರಾಶಸ್ತ್ಯ ಮತ ನೀಡಿ ಆಯ್ಕೆ ಮಾಡಬೇಕಿದೆ. ಕ್ಷೇತ್ರದ ಶಿಕ್ಷಕರ ಸಮಸ್ಯೆಗಳಿಗೆ ಕ್ರಿಯಾಶೀಲವಾಗಿ ಸ್ಪಂದಿಸುವ ಎಲ್ಲಾ ಗುಣಗಳು ಡಿ.ಟಿ.ಶ್ರೀನಿವಾಸ್‌ರವರಲ್ಲಿವೆ ಎಂದರು. ಸಭೆಯಲ್ಲಿ ಪಕ್ಷದ ಕಾರ್ಯದರ್ಶಿ ಪಿ.ತಿಪ್ಪೇಸ್ವಾಮಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ನೇತಾಜಿಪ್ರಸನ್ನ, ಜೆ.ಟಿ.ವೀರಭದ್ರಸ್ವಾಮಿ, ಮೂಡಲಗಿರಿಯಪ್ಪ, ದೊಡ್ಡಯ್ಯ, ಶ್ರೀನಿವಾಸ್, ವಸಂತಕುಮಾರ್ ಮುಂತಾದವರು ಉಪಸ್ಥಿತರಿದ್ದರು.

# ಮೋಡ ಕವಿದ ವಾತಾವರಣ
# ಮಳೆ ಹನಿಯ ಸಿಂಚನ ಜತೆ ಹಳ್ಳಿ ಸೊಗಸು

» ಮಹದೇವಪುರ ಶಿವಮೂರ್ತಿ

ಪರಶುರಾಂಪುರ-ಬಯಲು ಪ್ರದೇಶದಲ್ಲಿ ಮೋಡ ಕವಿದ ವಾತಾವರಣ ಸಹಿತ ಆಗಾಗ ಜಿಟಿಜಿಟಿ ಮಳೆಯಾಗುತ್ತಿದೆ. ಇದರಿಂದ ತಾಪಮಾನ ಕುಸಿತಗೊಂಡು ಬೀಸುತ್ತಿರುವ ತಣ್ಣನೆಯ ಗಾಳಿಯಿಂದ ಜನ ಮೈನಡುಗುವ ಚಳಿಯ ಅನುಭವ ಪಡೆಯುತ್ತಿದ್ದಾರೆ.

ವೇಗವಾಗಿ ಗಾಳಿ ಬೀಸುತ್ತಿದ್ದುದರಿಂದ ಮೈ ನಡುಗಿಸುವ ಚಳಿಗೆ ಜನ ತತ್ತರಿಸಿದ್ದಾರೆ. ಬೆಚ್ಚನೆ ಉಡುಪು ತೊಟ್ಟು ಸಂಚರಿಸುತ್ತಿದ್ದಾರೆ. ತಂಪಾದ ಗಾಳಿಯಿಂದ ತಪ್ಪಿಸಿಕೊಳ್ಳಲು ಜನ ಬಾಗಿಲು ಮುಚ್ಚಿಕೊಂಡು ಮನೆಯಲ್ಲಿಕುಳಿತುಕೊಳ್ಳುವಂತೆ ಮಾಡಿದೆ.

'ವಾತಾವರಣದಲ್ಲಿ ತಾಪಮಾನ ಕುಸಿತವಾದರೆ,ತಂಪಿಗೆ ಪೂರಕವಾದ ಸ್ಥಿತಿ ಉಂಟಾಗುತ್ತದೆ. ಹಾಗಾಗಿ, ಚಳಿಯ ಅನುಭವ ಆಗುತ್ತಿರಬಹುದು. ಆದರೆ, ಇದನ್ನು ಆಧರಿಸಿ ಚಳಿಗಾಲ ಆರಂಭವಾಗಿದೆ ಎಂದು ಭಾವಿಸುವಂತಿಲ್ಲ' ಎನ್ನುತ್ತಾರೆ ಹಿರಿಯರು.

ಬಿಸಿಲಿನ ತಾಪದಿಂದ ಬಳಲಿದ್ದ ಜನರಿಗೆ ವರುಣ ತಂಪೆರದಿದ್ದಾನೆ.



ಮೋಡ ಕವಿದ ವಾತಾವರಣವಿದ್ದು ಅಲ್ಲಲ್ಲಿ ಮಳೆ ಸುರಿದಿದೆ. ಬಿಸಿಲಿನಿಂದ ಹೊರ ಬರಲು ಹೈರಾಣಾಗುತ್ತಿದ ಜನ ಮಳೆ ಕಂಡು ನೆಮ್ಮದಿಯ ನಿಟ್ಟುಸಿರು ಬಿಟ್ಟಿದ್ದಾರೆ.ಕಳೆದ ದಿನಗಳಿಂದ ತಂಪಾದ ವಾತಾವರಣ ಕಂಡುಬರುತ್ತಿದ್ದು,ರಾತ್ರಿ ವೇಳೆಗೆ ಕ್ರಮೇಣ ಚಳಿ ಆವರಿಸಿಕೊಂಡ ಅನುಭವವಾಗುತ್ತಿದೆ.

ಹಳ್ಳಿ ಜೀವನವೆಂದರೆ ಬಲು ಸೊಗಸು- ನೀಲಿ ಆಕಾಶ, ಆಗಸದ ತುಂಬೆಲ್ಲ ನಲಿಯುತ್ತ ನುಲಿಯುತ್ತ ಹಾರುವ ಹಕ್ಕಿಗಳು, ಎಲ್ಲೆಂದರಲ್ಲಿ ಕಾಣುವ ಕೆರೆ ತೊರೆಗಳು, ಹಸುರಿನಿಂದ ಕಂಗೊಳಿಸುವ ಬೆಟ್ಟ ಗುಡ್ಡಗಳು, ಜೀವಕ್ಕೆ ಜೀವ ಕೊಡುವ ನೆರೆಹೊರೆಯವರು. ಕಣ್ಣಾಡಿಸಿದಲ್ಲೆಲ್ಲಾ ಹಸುರು, ಸೂಕ್ಷ್ಮವಾಗಿ ಆಲಿಸಿದಾಗ ಕೇಳುವ ನದಿ ಹರಿಯುವ ಸದ್ದು, ದೂರದಲ್ಲೆಲ್ಲೋ ಇರೋ ಬೆಟ್ಟ ಕಾಣುವಷ್ಟು ಸ್ವಚ್ಛಂದ ಆಕಾಶ, ಹಕ್ಕಿಗಳ ಕಲರವ, ಕೆಲವೆಡೆ ರಾತ್ರಿಯಾದಾಗ ಆಕಾಶವಾಣಿಯಂತೆ ಕೇಳುವ ಗೂಬೆಯ ಕೂಗು, ಆ ಶಬ್ದಕ್ಕೆ ತಾಳ ಹಾಕುವಂತೆ ಕೇಳುವ ಪುಟ್ಟ ಹುಳದ ದನಿ, ಕತ್ತಲಾದಾಗಲೆಲ್ಲ ಮಿಂಚುವ ಮಿಂಚು ಹುಳಗಳು, ಮಳೆ ಮುನ್ಸೂಚನೆ ನೀಡುವ ಹಕ್ಕಿಯ ಕೂಗು, ದಪ್ಪ ಕಂಬಳಿಯಂತೆ ಆವರಿಸುವ ಕಾರ್ಮೋಡ, ಮಳೆ ಬಂದಾಗ ಪಸರಿಸುವ ಮಣ್ಣಿನ ಘಮ, ಹೂಗಳ ಪರಿಮಳ ಬೆರೆತು ಬೀಸುವ ತಂಪುಗಾಳಿ ಮೈ ಜುಮ್ಮೆನಿಸಿ ಹಳ್ಳಿಯ ಸೊಗಸು ಮನಸ್ಸಿಗೆ ಮುದ ನೀಡುತ್ತಿದೆ

ಜಿಟಿಜಿಟಿ ಮಳೆ ಆಗೊಮ್ಮೆ, ಈಗೊಮ್ಮೆ ಜೋರಾಗಿ ಸುರಿದಿದ್ದು, ಬರಗಾಲವಿದ್ದ ಊರಿಗೆ ಹಸಿರುಮಯ ಗೋಚರವಾಯಿತು.

ದಿನವಿಡೀ ಮೋಡ ಕವಿದ ವಾತಾವರಣವಿತ್ತು. ತಾಪಮಾನ ಕಡಿಮೆಯಾಗಿ ಹಿತಕರವಾದ ತಂಪುಗಾಳಿ ಬೀಸಿತು. ಇದರಿಂದ ಮನೆ ಮೂಲೆ ಸೇರಿದ್ದ ಸ್ವೆಟರ್, ಜರ್ಕಿನ್, ಕೈಗವಸುಗಳನ್ನು ಹೊರತೆಗೆದು ಧರಿಸಿಕೊಂಡ ಜನರು, ಚಳಿಯಿಂದ ರಕ್ಷಿಸಿಕೊಂಡು ಬೆಚ್ಚಗಾದರು.

ಫಾಸ್ಟ್ ನ್ಯೂಸ್

## ಮೈರಾಡ ಕಾಲೋನಿ ಮನೆ ಮತ್ತು ಗ್ಯಾರೇಜಿಗೆ ಮಳೆ ನೀರು ನುಗ್ಗಿ ಅಪಾರ ಹಾನಿ







» ಚಳ್ಳಕೆರೆ

ಪ್ರಸ್ತುತ ವರ್ಷದಲ್ಲಿ ಚಳ್ಳಕೆರೆ ತಾಲ್ಲೂಕಿನಾದ್ಯಂತ ಜನರ ನಿರೀಕ್ಷೆಯನ್ನು ಹುಸಿಗೊಳಿಸುವಂತೆ ಭಾರಿಪ್ರಮಾಣದಲ್ಲಿ ವರುಣರಾಯ ಆಗಮಿಸಿ ಜನರಿಗೆ ಸಂತಸವನ್ನುಂಟು ಮಾಡಿದ್ದಾನೆ. ಆದರೆ, ಇದರ ಬೆನ್ನಹಿಂದೆಯೇ ಹೆಚ್ಚಿನ ಮಳೆಯಿಂದ ಮನೆ, ಬೆಳೆಗೂ ಹೆಚ್ಚಿನ ಹಾನಿಯಾಗಿದ್ದಲ್ಲದೆ, ನಗರದ ಕೆಳಅಂತಸ್ತಿನ ಅಂಗಡಿ ಮಳಿಗೆ, ಮನೆಗಳಿಗೆ ನೀರು ನುಗ್ಗಿ ಅಪಾರವಾದ ಹಾನಿ ಉಂಟು ಮಾಡಿದೆ.

ನಗರ ವ್ಯಾಪ್ತಿಯ ಬೊಮ್ಮಸಮುದ್ರ ರಸ್ತೆಯ ಮೈರಾಡ ಕಾಲೋನಿಯ ಸುಮಾರು 12 ಮನೆಗಳಿಗೆ ನೀರು ನುಗ್ಗಿದ್ದು ಮನೆಯಲ್ಲಿನ ಆಹಾರ ಪದಾರ್ಥ, ಬಟ್ಟೆ, ವಸ್ತುಗಳು ನೀರಿನಿಂದ ಆವೃತ್ತಿಯಾಗಿವೆ. ನಗರದ ಹೃದಯ ಖಾಗದಲ್ಲಿರುವ ಖಾಸಗಿ ಬಸ್ಟಾಂಡ್ ಹಿಂಭಾಗದ ಎಂ.ಸಂಜೀವಪ್ಪ(ರಾಜಣ್ಣ) ಎಂಬುವವರ ಮಂಜುನಾಥ ಆಟೋಗ್ಯಾರೇಜ್ ಮತ್ತು ಬ್ಯಾಟರಿ ಸರ್ವಿಸ್ ಕೇಂದ್ರದ ಎರಡು ಮಳಿಗೆಗೆ ಅಪಾರವಾದ ನೀರು ನುಗ್ಗಿ ಸುಮಾರು ಮೂರು ಲಕ್ಷ ನಷ್ಟ ಸಂಭವಿಸಿದೆ. ತಾಲ್ಲೂಕಿನ ತಳಕು ಹೋಬಳಿಯ ಘಟಪರ್ತಿಗ್ರಾಮದ ರಿ.ಸರ್ವೆ ನಂ. 39/3ರ ಎರಡು ಎಕರೆ ಪ್ರದೇಶದಲ್ಲಿದ್ದ ನಾಗವೇಣಿ ಎಂಬುವವರಿಗೆ ಸೇರಿದ ಟಮೋಟ ಬೆಳೆ ನೀರಿನಲ್ಲಿ ಕೊಚ್ಚಿಹೋಗಿದೆ. ಕೆ.ಡಿ.ಕೋಟೆ ವ್ಯಾಪ್ತಿಯ ತಪ್ಪಗೊಂಡನಹಳ್ಳಿ ಗ್ರಾಮದಲ್ಲಿ ರಿ.ಸರ್ವೆ ನಂ. 51ರಲ್ಲಿ ಶಾಂತಮ್ಮ ಎಂಬುವವರಿಗೆ ಸೇರಿದ ಒಂದು ಎಕರೆ ಪ್ರದೇಶದ ರಾಗಿಬೆಳೆ ನೀರಿನಲ್ಲಿ ಮುಳುಗಿದೆ. ತಿಪ್ಪಾರೆಡ್ಡಿಹಳ್ಳಿ ಗ್ರಾಮದಲ್ಲಿ ಲಕ್ಷ್ಮಿದೇವಿ ಎಂಬುವವರಿಗೆ ಸೇರಿದ ಮನೆ ಕುಸಿದು ಬಿದ್ದು 50 ಸಾವಿರ ನಷ್ಟ ಉಂಟಾಗಿದೆ. ಓಬಯ್ಯನಹಟ್ಟಿ ಗ್ರಾಮದ ಪ್ರೇಮಲತಾ ಎಂಬುವವರಿಗೆ ಸೇರಿದ ಮನೆ ಬಿದ್ದು 50 ಸಾವಿರ, ಗುಂತಕೋಲಮ್ಮನಹಳ್ಳಿ ಗ್ರಾಮದ ಪಾಲಮ್ಮ ಎಂಬುವವರಿಗೆ ಸೇರಿದ ಮನೆ ಬಿದ್ದು 30 ಸಾವಿರ, ನಾಯಕನಹಟ್ಟಿ ವಾಸಿ ಪ್ರಭಣ್ಣ ಎಂಬುವವರ ಸೇರಿದ ವಾಸದ ಮನೆ ಬಿದ್ದು 50 ಸಾವಿರ ನಷ್ಟವಾಗಿದೆ. ಗಿಡ್ಡಾಪುರದ ವಾಸಿ ಕೊಲ್ಲಾರಮ್ಮ ಎಂಬುವವರಿಗೆ ಸೇರಿದ ಮನೆ ಬಿದ್ದು 45 ಸಾವಿರ, ಕುದಾಪುರ ಗ್ರಾಮದ ಮಂಗಳಮ್ಮ ಎಂಬುವವರ ಜಮೀನಿನಲ್ಲಿದ್ದ ಸುಮಾರು 7 ತೆಂಗಿನ ಮರಗಳಿಗೆ ಸಿಡಿಲು ಬಡಿದು ಸಂಪೂರ್ಣಸುಟ್ಟಿವೆ. ಕೃತಿಕ ಮಳೆಯ ಅಂತಿಮದಿನವಾದ ಶುಕ್ರವಾರ ತಡರಾತ್ರಿ ತಾಲ್ಲೂಕಿನಾದ್ಯಂತ ಮತ್ತೊಮ್ಮೆ ಮಳೆ ಪ್ರಮಾಣ ಹೆಚ್ಚಿದ್ದು, ಚಳ್ಳಕೆರೆ-50.00, ಪರಶುರಾಮಪುರ-36.04, ತಳಕು-51.02, ನಾಯಕನಹಟ್ಟಿ-65.06, ದೇವರಮರಿಕುಂಟೆ-41.02 ಒಟ್ಟು 243.14 ಎಂ.ಎಂ.

## ಜಾತಿನಿಂದನೆ ಆರೋಪ: ಶಿವಕುಮಾರ್‌ಸ್ವಾಮಿ ಮತ್ತು ಯೋಗೇಶ್ ಮೇಲೆ ಪ್ರಕರಣ ದಾಖಲು

» ಚಳ್ಳಕೆರೆ

ನಗರದ ಬೆಂಗಳೂರು ರಸ್ತೆಯ ರಾಘವ ಸುಡಿಯೋ ಮುಂಭಾಗದಲ್ಲಿ ರಸ್ತೆಗೆ ಅಡ್ಡವಾಗಿ ನಿಂತಿದ್ದ ಬೈಕನ್ನು ತೆಗೆಯಲು ಹೇಳಿದಾಗ ಕೋಪಗೊಂಡ ಬೈಕ್ ಸವಾರ ಸೂರನಹಳ್ಳಿ ಸಿ.ಎಂ.ಶಿವಕುಮಾರಸ್ವಾಮಿ, ಯಲಗಟ್ಟೆಯ ಯೋಗೇಶ್ ಜಾತಿನಿಂದನೆ ಮಾಡಿ ಹಲ್ಲೆ ನಡೆಸಿದ್ದಾರೆಂದು ಆರೋಪಿಸಿ ಅಸ್ಪೃಶ್ಯತೆ ಕಾಯ್ದೆಯಡಿ ದೂರು ದಾಖಲು ಮಾಡಲಾಗಿದೆ.

ವಿಠಲನಗರ ನಿವಾಸಿ ಎಚ್.ಎನ್.ಆದರ್ಶ ಈ ಬಗ್ಗೆ ದೂರು ನೀಡಿ, ಮೇ. 24ರ ರಾತ್ರಿ ನಾನು ನನ್ನ ಸ್ನೇಹಿತ ಕೆ.ಎನ್.ರಾಘವೇಂದ್ರರವರು ಬೈಕ್‌ನಲ್ಲಿ ಬರುವ ಸಂದರ್ಭದಲ್ಲಿ ಶಿವಕುಮಾರ್‌ಸ್ವಾಮಿ ಮತ್ತು ಯೋಗೇಶ್ ಬೈಕ್‌ಗಳು ನಮ್ಮ ಮುಂದೆ ಅಡ್ಡಲಾಗಿ ನಿಂತಿದ್ದು ನಮ್ಮ ಹಿಂದಿನ ಬೈಕ್ ಸವಾರರು ಶಬ್ದ ಮಾಡಿದ ಹಿನ್ನೆಲೆಯಲ್ಲಿ ನಮ್ಮ ಮೇಲೆ ಅವರು ಜಾತಿನಿಂದನೆ ಮಾಡಿ ಹಲ್ಲೆ ನಡೆಸಿದ್ದಾರೆಂದು ದೂರು ನೀಡಿದ್ದು, ಪಿಎಸ್‌ಐ ಜೆ.ಶಿವರಾಜ್ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

## ಆಗ್ನೇಯ ಶಿಕ್ಷಕರ ಕ್ಷೇತ್ರ: ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್ ಪರ ಶಾಸಕ ಟಿ.ರಘುಮೂರ್ತಿ ವ್ಯಾಪಕ ಪ್ರಚಾರ



■ ಚಳ್ಳಕೆರೆ

ರಾಜ್ಯದ ರಾಜಕೀಯ ಇತಿಹಾಸದಲ್ಲಿ ಮಹಿಳಾ ಸಮುದಾಯಕ್ಕೆ ಉಚಿತ ಬಸ್ ಪಾಸನ್ನು ಮೊದಲ ಬಾರಿಗೆ ನೀಡಿದ ಕೀರ್ತಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರವರದ್ದು. ಇದರಿಂದ ಮಹಿಳೆಯರು ತಮ್ಮ ಕೆಲಸ ಕಾರ್ಯಗಳಿಗಾಗಿ ಉಚಿತವಾಗಿ ರಾಜ್ಯ ಯಾವುದೇ ಪ್ರದೇಶಕ್ಕೆ ಹೋಗಿಬರುವ ಅವಕಾಶವನ್ನು ಸರ್ಕಾರ ಕಲ್ಪಿಸಿದೆ. ಮುಂದಿನ ದಿನಗಳಲ್ಲಿ ಶಿಕ್ಷಕರ ಸಮಸ್ಯೆಗಳ ಬಗ್ಗೆ ಹೆಚ್ಚು ಯೋಜನೆಗಳನ್ನು ರೂಪಿಸುವ ಉದ್ದೇಶ ಹೊಂದಿದೆ ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರದ ಬಾಪೂಜಿ ವಿದ್ಯಾಸಂಸ್ಥೆಯಲ್ಲಿ ಆಗ್ನೇಯ ಶಿಕ್ಷಕರ ಕ್ಷೇತ್ರದ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್‌ಪರ ಮತಯಾಚನೆ ಮಾಡಿ ಮಾತನಾಡಿದರು. ಡಿ.ಟಿ.ಶ್ರೀನಿವಾಸ್ ಕ್ರಿಯಾಶೀಲ ವ್ಯಕ್ತಿಯಾಗಿದ್ದು, ಹಲವಾರು ಸಮಸ್ಯೆಗಳಿಗೆ ಈಗಾಗಲೇ ಪರಿಹಾರವನ್ನು ರೂಪಿಸಿಕೊಡುವಲ್ಲಿ ಯಶಸ್ವಿಯಾಗಿದ್ದಾರೆ. ಕಳೆದ ಹತ್ತಾರು ವರ್ಷಗಳಿಂದ ಶಿಕ್ಷಕರ ಸಮಸ್ಯೆಗಳ ಬಗ್ಗೆ ರಾಜ್ಯಮಟ್ಟದಲ್ಲಿ ಚರ್ಚೆ ನಡೆಸಿದ್ದಾರೆ. ಈ ಬಾರಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದು ಮೊದಲ ಪ್ರಾಶಸ್ತ್ಯ ಮತವನ್ನು ನೀಡಬೇಕೆಂದರು.

ಮಾಜಿ ಶಾಸಕಿ ಪೂರ್ಣಿಮಾಶ್ರೀನಿವಾಸ್ ಮಾತನಾಡಿ, ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್ ಬಗ್ಗೆ ಶಾಸಕರು ಈಗಾಗಲೇ ಸಾಕಷ್ಟು ಮಾಹಿತಿ ನೀಡಿದ್ದಾರೆ. ನಾನು ಸಹ ಕಳೆದ ಬಾರಿ ಹಿರಿಯೂರು ಕ್ಷೇತ್ರದ ಶಾಸಕರಾಗಿ ಕಾರ್ಯನಿರ್ವಹಿಸಿದ್ದೇನೆ. ಈ ಭಾಗದ ಶಿಕ್ಷಕರ ಸಮಸ್ಯೆಗಳ ಬಗ್ಗೆ ಸಾಕಷ್ಟು ಮಾಹಿತಿ ಇದೆ. ಡಿ.ಟಿ.ಶ್ರೀನಿವಾಸ್ ಸಹ ಶಿಕ್ಷಕರ ಸರ್ವತೋಮುಖ ಅಭಿವೃದ್ದಿಗೆ ಪ್ರಾಮಾಣಿಕವಾಗಿ ಹೋರಾಟ ನಡೆಸುವ ವ್ಯಕ್ತಿಯಾಗಿದ್ದಾರೆ. ತಮ್ಮೆಲ್ಲರ ಮತವನ್ನು ಅವರಿಗೆ ನೀಡಿ ವಿಧಾನಪರಿಷತ್‌ಗೆ ಆಯ್ಕೆ ಮಾಡುವಂತೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರಾದ ಟಿ.ರವಿಕುಮಾರ್, ಬಾಬುರೆಡ್ಡಿ, ಕೆಪಿಸಿಸಿ ರಾಜ್ಯ ಪ್ರಧಾನಕಾರ್ಯದರ್ಶಿ ರಾಮಪ್ಪ, ನಿವೃತ್ತ ಬ್ಯಾಂಕ್ ಅಧಿಕಾರಿ ಸೂರನಾಯಕ, ಬಾಪೂಜಿ ವಿದ್ಯಾಸಂಸ್ಥೆ ಆಡಳಿತಾಧಿಕಾರಿ ಜಿ.ಬಾಲರೆಡ್ಡಿ ಹಾಗೂ ಶಿಕ್ಷಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ತಾಲ್ಲೂಕಿನಾದ್ಯಂತ ಮಳೆ ಅವಾಂತರ ಲಕ್ಷಾಂತರ ರೂಪಾಯಿ ಬೆಳೆ ನೀರಿಗೆ ಆಹುತಿ : ಮನೆಗಳು ಬಿದ್ದು ಸಾವಿರಾರೂಪಾಯಿ ನಷ್ಟ



» ಚಳ್ಳಕೆರೆ

ತಾಲ್ಲೂಕಿನಾದ್ಯಂತ ಶುಕ್ರವಾರ ಮತ್ತು ಶನಿವಾರ ಬಿದ್ದ ಮಳೆಗೆ ತಾಲ್ಲೂಕಿನ ವಿವಿಧ ಭಾಗಗಳಲ್ಲಿ ಮನೆಗಳು ಕುಸಿದು, ಬೆಳೆಗೆ ಹಾನಿಯಾಗಿ ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿದೆ. ಕಂದಾಯ ಇಲಾಖೆ ಅಧಿಕಾರಿಗಳು ಗ್ರಾಮಗಳಿಗೆ ಭೇಟಿ ನೀಡಿ ನಷ್ಟದ ಅಂದಾಜಿನ ವರದಿ ಸಿದ್ದಪಡಿಸುತ್ತಿದ್ದಾರೆ.

ತಾಲ್ಲೂಕಿನ ಮತ್ಸಮುದ್ರ ಗ್ರಾಮದ ತಿಪ್ಪೇಸ್ವಾಮಿ ಎಂಬುವವರ ಮನೆ ಮಳೆಯಿಂದ ಕುಸಿದು ಬಿದ್ದು ಸುಮಾರು 70 ಸಾವಿರ ನಷ್ಟ ಸಂಭವಿಸಿದೆ. ಕಸವಿಗೊಂಡನಹಳ್ಳಿ ಗ್ರಾಮದ ಶಾಂತಮ್ಮ ಎಂಬುವವರಿಗೆ ಸೇರಿದ ರಾಗಿ ಬೆಳೆ ನೀರಿನಲ್ಲಿ ಮುಳುಗಿ ಸುಮಾರು 20 ಸಾವಿರ ನಷ್ಟ ಸಂಭವಿಸಿದೆ. ತಾಲ್ಲೂಕಿನ ನನ್ನಿವಾಳ ಗ್ರಾಮದ ರಿ.ಸರ್ವೆ ನಂ, 163/4 ಲಕ್ಷ್ಮಿದೇವಿ ಎಂಬುವವರಿಗೆ ಸೇರಿದ ಪಪ್ಪಾಯಿ ಬೆಳೆ ಮಳೆಯಿಂದ ನೆಲಕಚ್ಚಿದೆ, ಅದೇ ಗ್ರಾಮದ ಎ.ಎನ್.ಅಜ್ಜಣ್ಣ ಎಂಬುವವರಿಗೆ ಸೇರಿದ ಎರಡು ಪ್ರದೇಶದ ಪಪ್ಪಾಯಿ ಬೆಳೆ ಗಾಳಿಗೆ ಮುರಿದು ಬಿದ್ದು 30 ಸಾವಿರ ನಷ್ಟ ಸಂಭವಿಸಿದೆ. ತಳಕು ಹೋಬಳಿಯ ಸಿರಿವಾಳ ಓಬಳಾಪುರ ಗ್ರಾಮದ ರಿ.ಸರ್ವೆ ನಂ, 7ರ ಬಾಬು ಎಂಬುವವರಿಗೆ ಸೇರಿದ ತೋಟದಲ್ಲಿದ್ದ ಅಡಿಕೆ ಬೆಳೆ ಗಾಳಿ, ಮಳೆಗೆ ಮುರಿದು ಬಿದ್ದು ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿದೆ.

ಪ್ರಮುಖ ಸುದ್ದಿ

# ನಗರದ ರಾಜಾಮಾತೆ ಉಚ್ಚಂಗಿ ಯಲ್ಲಮ್ಮ ಸಿಡಿ ಉತ್ಸವ

» ಚಿತ್ರದುರ್ಗ

ಚಿತ್ರದುರ್ಗ ನಗರದ ಗ್ರಾಮ ದೇವತೆಗಳಲ್ಲಿ ಒಂದಾದ ಶ್ರೀ ಉಚ್ಚಂಗಿ ಯಲ್ಲಮ್ಮ ಅಮ್ಮನವರ ಸಿಡಿ ಉತ್ಸವವೂ ಇಂದು ಸಡಗರ ಶ್ರದ್ಧಾ ಭಕ್ತಿಯಿಂದ ನೆರವೇರಿತು.

ದೊಡ್ಡಪೇಟೆಯಲ್ಲಿ ನೆಲೆಸಿರುವ ಅಮ್ಮನಿಗೆ ಕಳೆದ ಒಂದು ವಾರದಿಂದ ವಿವಿದ ರೀತಿಯ ಪೂಜೆಗಳನ್ನು ನೇರವೇರಿಸಿ ತದ ನಂತರ ನಿನ್ನೆ ನಗರದ ವಿವಿಧ ಬೀದಿಗಳಲ್ಲಿ ಮೆರವಣಿಗೆಯನ್ನು ನೇರವೇರಿಸಿ ಭಕ್ತಾಧಿಗಳಿಂದ ಪೂಜೆಯನ್ನು ಸ್ವೀಕಾರ ಮಾಡಿ, ಇಂದು ಹರಕೆಯನ್ನು ಹೊತ್ತ ಭಕ್ತಾಧಿಗಳು ತಾಯಿಯ ಸನ್ನಿಧಿಯಲ್ಲಿ ಸಿಡಿಯನ್ನು ಆಡುವುದರ ಮೂಲಕ ತಾಯಿಗೆ ತಮ್ಮ ಭಕ್ತಿಯನ್ನು ಸಮರ್ಪಿಸಿದರು.ಮೇ. 14ರಂದು ಅಮ್ಮನವರ ಜಾತ್ರಾ ಮಹೋತ್ಸವದ ಅಂಗವಾಗಿ ಸಾರನ್ನು ಹಾಕಿ ಮೇ. 18ರಂದು ಅಮ್ಮನವರಿಗೆ ಕಂಕಣಧಾರಣೆ, ಮದಲಿಂಗಿತ್ತಿಯ ಪೂಜೆಯನ್ನು ಮಾಡಲಾಯಿತು. ರಾತ್ರಿ ಅಮ್ಮನವರಿಗೆ ಸಿಂಹಉತ್ಸವವನ್ನುನೇರವೇರಿಸಲಾಯಿತು. ಮೇ. 19ರಂದು ಸರ್ಪೋತ್ಸವ ಮೇ.20 ರಂದು ನವಿಲು ಉತ್ಸವ, ಮೇ. 21ರಂದು ದೇವಿಗೆ ಅಭೀಷೇಕ ಹಾಗೂ ಮಹಾ ಮಂಗಳಾರತಿಯನ್ನು ನಡೆಸಲಾಯಿತು. ಮೇ. 22ರಂದು ದೇವಿಯು ಕೆಳಗಿಳಿದು ರಾಜಬೀದಿಯಲ್ಲಿ ಕುದುರೆ ಉತ್ಸವ ಮತ್ತು ಅನ್ನ ಸಂತರ್ಪಣೆಯನ್ನು ನಡೆಸಲಾಯಿತು. ಮೇ. 23ರಂದು ದೇವಿಗೆ ಅಭೀಷೇಕ ಮಹಾ ಮಂಗಳಾರತಿ ನಡೆದಿದ್ದು, ಮೇ. 24 ರಂದು ದೇವಿಗೆ ಅಭೀಷೇಕ ಮತ್ತು ಮಹಾ ಮಂಗಳಾರತಿಯ ನಂತರ ರಥೋತ್ಸವವನ್ನು ನಗರದಲ್ಲಿ ನಡೆಸಲಾಯಿತು. ಮೇ. 23 ರ ಬೆಳಿಗ್ಗೆ 8 ಕ್ಕೆ ದೇವಿಗೆ ಅಭೀಷೇಕ ರಾತ್ರಿ 9ಕ್ಕೆ ಜೋಗಪ್ಪ ಮತ್ತು ಜೋಗಮ್ಮನವರಿಂದ ಓಕುಳಿ ಕಾರ್ಯಕ್ರಮ ನಡೆಯಲಿದ್ದು ಮೇ. 28 ರಂದು ಬೆಳಿಗ್ಗೆ 8 ಕ್ಕೆ ದೇವಿಗೆ ಅಭೀಷೇಕ ಕಂಕಣ ವಿಸರ್ಜನೆಯೊಂದಿಗೆ ಈ ವರ್ಷದ ಜಾತ್ರಾ ಕಾರ್ಯಕ್ರಮ ಮುಕ್ತಾಯವಾಗಲಿದೆ.ತಾಯಿಯಲ್ಲಿ ವಿವಿಧ ರೀತಿಯ ಬೇಡಿಕೆಯನ್ನು ಇರಿಸಿದ ಭಕ್ತ ಸಮೂಹ ಅದನ್ನು ಈಡೇರಿಸುವಂತೆ ತಾಯಿಯಲ್ಲಿ ಮನವಿ ಮಾಡಿದ್ದು ಅದು ಈಡೇರಿದ್ದರಿಂದ ಇಂದು ತಾಯಿಗೆ ನೀಡಿದ ಮಾತಿನಂತೆ ಒಂದು ವಾರಗಳ ಕಾಲ ಉಪವಾಸ ಇದ್ದು ಇಂದು ಮೈಗೆಲ್ಲ ಹರಿಷಿಣವನ್ನು ಲೇಪಿಸಿಕೊಂಡು ತಲೆಗೆ ಧಿರಿಸನ್ನು ಧರಿಸಿ, ಕೈಯಲ್ಲಿ ಖಡ್ಗವನ್ನು ಹಿಡಿದು ಅದಕ್ಕೆ ತುದಿಯಲ್ಲಿ ನಿಂಬೆಹಣ್ಣನ್ನು ಸಿಕಿಸಿ ತಾಯಿಗೆ ಪ್ರಿಯವಾದ ಉರಿಮೆಯ ನಾದದೊಂದಿಗೆ ತಾಯಿಯ ಸನ್ನಿಧಾನಕ್ಕೆ ಆಗಮಿಸಿ ಪೂಜೆಯನ್ನು ಸಲ್ಲಿಸಿ ಅಲ್ಲಿ ಸಮಿತಿಯವರು ನಿರ್ಮಾಣ ಮಾಡಿದ ಕಂಬದಲ್ಲಿ ಕಟ್ಟಿ ಮೂರು ಸುತ್ತು ಸುತ್ತುವುದರೊಂದಿಗೆ ತಾಯಿಗೆ ತಮ್ಮ ಹರಕೆಯನ್ನು ಸಲ್ಲಿಸಿದರು.ಕೋವಿಡ್ ಹಿನ್ನಲೆಯಲ್ಲಿ ಕಳೆದ 4 ವರ್ಷದಿಂದ ಸಿಡಿ ಆಡುವುದನ್ನು ಜಿಲ್ಲಾಡಳಿತ ನಿಷೇಧ ಮಾಡಿತ್ತು ಆದರೆ ಈ ಬಾರಿ ಎಲ್ಲವು ಸುಗಮವಾಗಿರುವುದರಿಂದ ಸಿಡಿಯನ್ನು ಆಡಲು ಜಿಲ್ಲಾಡಳಿತ ಸಮಿತಿಗೆ ಅನುಮತಿಯನ್ನು ನೀಡಿದ್ದರ ಹಿನ್ನಲೆಯಲ್ಲಿ ಸಮಿತಿಯವರು ಸಿಡಿಯನ್ನು ಆಡುವುದಕ್ಕೆ ತಯಾರಿಯನ್ನು ನಡೆಸಿ ತಾಯಿಯ ಹಾಗೂ ಭಕ್ತ ಆಸೆಯನ್ನು ಈಡೇರಿಸಿದ್ದಾರೆ. ಯಾವುದೇರೀತಿಯಅನಾಹುತವಾಗದಂತೆ ಎಚ್ಚರವನ್ನು ಸಮಿತಿ ವಹಿಸಿತ್ತು. ಪೋಲಿಸ್ ಭದ್ರತೆಯನ್ನು ಸಹಾ ಮಾಡಲಾಗಿತು.



Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T